ವಿಜಯಪುರ | ಸಂಪುಟ 04 | ಸಂಚಿಕೆ 194 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಸೆಪ್ಟೆಂಬರ್, 25, 2026

"ಲೇಟ್ ಆದರೂ, ಬಿಜೆಪಿ ಹೈಕಮಾಂಡ್ ನಿರ್ಧಾರ ಸರಿಯಾಗಿಯೇ ಇದೆ. ಅಧಿವೇಶನದ ಒಳಗೆ ಮತ್ತು ಹೊರಗೆ, ವಿಜಯೇಂದ್ರ ಹಾಗೂ ಆರ್.ಅಶೋಕ್ ನಡೆಸುತ್ತಿರುವ ಪ್ರತಿಭಟನೆಯು ಕೇವಲ ಐವಾಷ್, ಸಿಎಂ ಡಿಕೆ ಶಿವಕುಮಾರ್ ಅವರ ಅಣತಿಯಂತೆ ಇವರಿಬ್ಬರು ಕೆಲಸ ಮಾಡುತ್ತಿದ್ದರು. ಅದಕ್ಕಾಗಿ ಉಸ್ತುವಾರಿ ಬದಲಾವಣೆ ಮಾಡಿರಬಹುದು."



■ ಬಸನಗೌಡ ಪಾಟೀಲ ಯತ್ನಾಳ
ವಿಜಯಪುರ ಶಾಸಕ



## ಸರ್ಕಾರಿ ಅಕ್ಕಿ ಅಕ್ರಮ ಸಾಗಾಟ: ಯುವಕನ ಬಂಧನ

■ ಉದಯರಶ್ಮಿ ದಿನಪತ್ರಿಕೆ

■ ಪಿಕ್‌ಅಪ್ ವಾಹನ, 44 ಅಕ್ಕಿ ಚೀಲ ಸೇರಿ 2.60 ಲಕ್ಷ ಮೌಲ್ಯದ ವಸ್ತು ಜಪ್ತಿ । ಇಬ್ಬರು ಪರಾರಿ

ಚಡಚಣ: ಸರ್ಕಾರದ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ವಿತರಿಸಲಾಗುವ ಅಕ್ಕಿಯನ್ನು ಯಾವುದೇ ಪರವಾನಗಿ ಪಡೆಯದೆ ಅಕ್ರಮವಾಗಿ ಸಂಗ್ರಹಿಸಿ ಮಾರಾಟ ಮಾಡಲು ಸಾಗಿಸುತ್ತಿದ್ದ ಆರೋಪದ ಮೇಲೆ ಚಡಚಣ ಪೊಲೀಸರು ಓರ್ವನನ್ನು ಬಂಧಿಸಿ, ಇಬ್ಬರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.


ಚಡಚಣ ಪಟ್ಟಣದ ದೇವರನಿಂಬರಗಿ ಕ್ರಾಸ್ ಬಳಿ ಸೆ.23ರಂದು ಅಕ್ರಮವಾಗಿ ಅಕ್ಕಿ ಸಾಗಿಸುತ್ತಿದ್ದ ವೇಳೆ ಆರೋಪಿಯನ್ನು ಪತ್ತೆಹಚ್ಚಲಾಗಿದೆ. ಬಂಧಿತನನ್ನು ಚಡಚಣ ನಿವಾಸಿ ಆರೀಫ್ ಖಾಜಾಸಾಬ ಪಠಾಣ (18) ಎಂದು ಗುರುತಿಸಲಾಗಿದೆ. ಪ್ರಕರಣದಲ್ಲಿ ಹುಸೇನಬಾಷಾ ಗೈಬೀಸಾಬ ಟಪಾಲ ಹಾಗೂ ಶುಭಂ ಭಗವಾನ ಕ್ಷತ್ರಿ ಎಂಬುವರು ಆರೋಪಿಗಳಾಗಿದ್ದು, ಇಬ್ಬರೂ ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆಹಾರನಿರೀಕ್ಷಕಶಿವಾನಂದಸದಾಶಿವಕೋಳಿಅವರು ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ. ಆರೋಪಿಗಳು ಸಂಬಂಧಪಟ್ಟ ಇಲಾಖೆಯಿಂದ ಯಾವುದೇ ಲೈಸನ್ಸ್ ಪಡೆಯದೇ, ಸರ್ಕಾರದ ವಿವಿಧ ಯೋಜನೆಗಳಡಿ ವಿತರಿಸುವ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿ ಸ್ವಂತ ಲಾಭಕ್ಕಾಗಿ ಮಾರಾಟ ಮಾಡಲು ಸಾಗಿಸುತ್ತಿದ್ದರು ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಪೊಲೀಸರು ಆರೋಪಿಯಿಂದ ಕೆಎ–30 ಎ–3031 ಸಂಖ್ಯೆಯ ಪಿಕಪ್ ಗೂಡ್ಸ್ ವಾಹನವನ್ನು ವಶಕ್ಕೆ ಪಡೆದಿದ್ದು, ಇದರ ಅಂದಾಜು ಮೌಲ್ಯ 2 ಲಕ್ಷ ಎಂದು ತಿಳಿಸಲಾಗಿದೆ. ಅಲ್ಲದೆ, ಸುಮಾರು 4550 ಕೆ.ಜಿ. ತೂಕದ 44 ಅಕ್ಕಿ ಚೀಲಗಳು, ಒಟ್ಟು 2,290 ಕೆ.ಜಿ. ಅಕ್ಕಿ ಹಾಗೂ ಪರೀಕ್ಷೆಗಾಗಿ ಪಡೆದ 2 ಕೆ.ಜಿ. ಅಕ್ಕಿ ಮಾದರಿ ಜಪ್ತಿ ಮಾಡಲಾಗಿದೆ.

ಜಪ್ತಿ ಮಾಡಲಾದ ಅಕ್ಕಿಯ ಮೌಲ್ಯ 60,914 ಎಂದು ಅಂದಾಜಿಸಲಾಗಿದ್ದು, ವಾಹನ ಸೇರಿದಂತೆ ಒಟ್ಟು ಜಪ್ತಿ ವಸ್ತುಗಳ ಮೌಲ್ಯ 2,60,967.20 ಎಂದು ಎಫ್‌ಐಆರ್‌ನಲ್ಲಿ ನಮೂದಿಸಲಾಗಿದೆ.

ಈ ಕುರಿತು ಚಡಚಣ ಪೊಲೀಸ್ ಠಾಣೆಯಲ್ಲಿ ಅವಶ್ಯಕ ವಸ್ತುಗಳ ಕಾಯ್ದೆ1955ರ ಕಲಂ 3 ರೆ/ವು ಹಾಗೂ 7 ರ ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ ಎಂದು ಪಿಎಸ್‌ಆಯ್ ಅರವಿಂದ ಅಂಗಡಿ ಹೇಳಿದ್ದಾರೆ.



## ತಡವಲಗಾದಲ್ಲಿ ಮುಂದುವರೆದ ರೈತರ ಧರಣಿ ಸತ್ಯಾಗ್ರಹ

■ ಉದಯರಶ್ಮಿ ದಿನಪತ್ರಿಕೆ


ಇಂಡಿ: ಭಾರತೀಯ ಕಿಸಾನ ಸಂಘದ ನೇತೃತ್ವದಲ್ಲಿ ತಾಲ್ಲೂಕಿನ ತಡವಲಗಾ ಗ್ರಾಮದ ಜೋಡಗುಡಿ ಹತ್ತಿರ ರೈತರು ನಡೆಸುತ್ತಿರುವ ಧರಣಿ ಸತ್ಯಾಗ್ರಹ ಗುರುವಾರ ಮೂರನೇ ದಿನಕ್ಕೆ ಕಾಲಿಟ್ಟಿದೆ.

ಹೋರಾಟ ಸ್ಥಳಕ್ಕೆ ಬಿಜೆಪಿ ರಾಜ್ಯ ರೈತಮೋರ್ಚಾ ಕಾರ್ಯಕಾರಿಣಿ ಸದಸ್ಯ ಅಣ್ಣಪ್ಪ ಖೈನೂರ ಭೇಟಿ ನೀಡಿ ಬೆಂಬಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಇಂಡಿ ತಾಲ್ಲೂಕಿನ ಎಲ್ಲಾ ಕೆರೆಗಳನ್ನು ತುಂಬಿಸಬೇಕು. ರೈತರಿಗೆ ಸಮರ್ಪಕವಾಗಿ ವಿದ್ಯುತ್ ಸರಬರಾಜು ಮಾಡಬೇಕು ಹಾಗೂ ಬೀಕರ ಬರಗಾಲದಿಂದ ಕಂಗಾಲಾಗಿದ್ದ ಹಾಗೂ ಬೆಳೆ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಭಾರತೀಯ ಕಿಸಾನ್ ಸಂಘದ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಗುರುನಾಥ ಬಗಲಿ ಹಾಗೂ ವಿಜಯಪೂರ ಜಿಲ್ಲಾ ಕಿಸಾನ್ ಸಂಘದ ಅಧ್ಯಕ್ಷ ಮಲ್ಲನಗೌಡ ಪಾಟೀಲ ಮಾತನಾಡಿದರು.

ಧರಣಿಯಲ್ಲಿ ಕಿಸಾನ್ ಸಂಘದ ಅಧ್ಯಕ್ಷರಾದ ಈರಪ್ಪ ಗೋಟ್ಯಾಳ, ದಸಗೀರಸಾಬ ಬಾಗವಾನ, ಅಂಬಣ್ಣ ಖಸ್ಕಿ, ಚನ್ನಪ್ಪ ಮಿರಗಿ, ಶಿವಲಿಂಗಪ್ಪ ಕಟ್ಟಿ, ಶಾಂತಪ್ಪ ಖಸ್ಕಿ, ಬಾಬು ಡೊಂಬರ, ಪ್ರಕಾಶ ಇಂಡಿ, ಶರಣಪ್ಪ ತಾರಾಪೂರ, ಅಂಬಣ್ಣ ಪಂತೋಜಿ, ಶಂಕ್ರೆಪ್ಪ ರೂಗಿ, ಭೀಮರಾಯ ಬುಕ್ಕಾಣಿ, ಧರೆಪ್ಪ ಮೇತ್ರಿ, ಗಂಗಪ್ಪ ಅಹಿರಸಂಗ, ಚಿದಾನಂದ ಮದರಿ, ಶಾಂತಪ್ಪ ರೂಗಿ, ಶರಣು ಪಂತೋಜಿ, ಚಂದ್ರಾಮ ಖಸ್ಕಿ, ಭೀಮಣ್ಣ ಕಪಾಲಿ, ಸಿದ್ದಗೊಂಡ ತೆನ್ನೆಳ್ಳಿ, ಚಂದ್ರಕಾಂತ ಮೇತ್ರಿ, ಮಾದೇವಪ್ಪ ಗೊಳ್ಳಗಿ, ಗುರಪ್ಪ ಮೇತ್ರಿ, ಮಳಸಿದ್ದಪ್ಪ ತಳವಾರ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.



## ಸೆ.29ಕ್ಕೆ 'ಹುಬ್ಬಳ್ಳಿ ಚಲೋ': ಕೇಂದ್ರ ಸಚಿವ ಮನೆ ಎದುರು ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೆ.29ರಂದು ಸಾವಿರಾರು ರೈತರ ಭಾಗವಹಿಸುವ 'ಹುಬ್ಬಳ್ಳಿ ಚಲೋ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಹುಬ್ಬಳ್ಳಿಗೆ ತೆರಳಿ 'ಹುಬ್ಬಳ್ಳಿ ಚಲೋ' ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮಹಿಳಾ ಘಟಕದ ತಾಲೂಕಾಧ್ಯಕ್ಷೆ ಜಗದೇವಿ ಬಿರಾದಾರ ಮನವಿ ಮಾಡಿದರು..

ಸಿಂದಗಿ ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮುಂಗಾರು ಮಳೆ ಕೊರತೆ ಹಾಗೂ ಬೆಳೆ ಇಳುವರಿ ಕುಸಿತದಿಂದ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಕಬ್ಬಿಗೆ ಪ್ರತಿ ಟನ್ 5,500ದರ ನಿಗದಿಪಡಿಸಬೇಕು, ಸಕ್ಕರೆಗೆ ಕ್ವಿಂಟಲ್‌ಗೆ 6,000 ಬೆಲೆ ನಿಗದಿಪಡಿಸಬೇಕು ಹಾಗೂ ಕೇಂದ್ರ ಸರ್ಕಾರವು ಮೂರು–ನಾಲ್ಕು ರಾಜ್ಯಗಳಿಂದ ಶೇ.100ರಷ್ಟು ಎಥ–'ನಾಲ್ ಖರೀದಿಸುತ್ತಿದ್ದು, ಕರ್ನಾಟಕದಿಂದ ಮಾತ್ರ ಶೇ.30ರಷ್ಟು ಖರೀದಿಸುತ್ತಿದೆ. ಕರ್ನಾಟಕದಿಂದಲೂ ಶೇ.100ರಷ್ಟು ಎಥನಾಲ್ ಖರೀದಿಸಬೇಕು. ಎಂ.ಎಸ್.ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸಬೇಕುಹಾಗೂಕನಿಷ್ಠಬೆಂಬಲಬೆಲೆ(ಎಂ–ಎಸ್ಪಿ) ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ರೈತ ಹಿತರಕ್ಷಣಾ ಸಮಿತಿಯ ರಾಜ್ಯ ಕಾರ್ಯದರ್ಶಿ ಪರಮಾನಂದ ಬಗಲಿ ಮಾತನಾಡಿ, ಬರದಿಂದ ಸಂಕಷ್ಟಕ್ಕೀಡಾದ ರೈತರಿಗೆ ಪ್ರತಿ ಎಕರೆಗೆ 50ಸಾವಿರ ಪರಿಹಾರ ನೀಡಬೇಕು ಹಾಗೂ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶರಣಗೌಡ ಪಾಟೀಲ, ಸಿದ್ಧನಗೌಡ ಪಾಟೀಲ, ಆನಂದ ಕಂಟಿಗೊಂಡ, ಸಂತೋಷ ಜೋಗೂರ ಸೇರಿದಂತೆ ಇತರರು ಇದ್ದರು.

## ಗೊಂದಲಕ್ಕೆ ತೆರೆ ಎಳೆದ ಸರ್ಕಾರ । ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿಧಾನಸಭೆಯಲ್ಲಿ ಘೋಷಣೆ । ಅ.11ಕ್ಕೆ ಮೈಸೂರು ದಸರಾ ಉದ್ಘಾಟನೆ

# ಮೈಸೂರು ದಸರಾ ಉದ್ಘಾಟಕರಾಗಿ ಗವಿಸಿದ್ದೇಶ್ವರ ಶ್ರೀ ಆಯ್ಕೆ

ಬೆಂಗಳೂರು: ವಿಶ್ವವಿಖ್ಯಾತ ಮೈಸೂರು ದಸರಾ 2026ರ ಉದ್ಘಾಟಕರು ಯಾರು ಎನ್ನುವ ಗೊಂದಲಕ್ಕೆ ಕೊನೆಗೂ ಗುರುವಾರ ತೆರೆ ಬಿದ್ದಿದೆ.

ಈ ಬಾರಿ ಮೈಸೂರು ದಸರಾ ಊದ್ಘಾಟಕರಾಗಿ ಕೊಪ್ಪಳದ ಗವಿಸಿದ್ದೇಶ್ವರ ಮಠದ ಶ್ರೀ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿಯನ್ನು ಆಯ್ಕೆ ಮಾಡಲಾಗಿದೆ ಎಂದು ಸ್ವತಃ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಇಂದು ವಿಧಾನಸಭೆಯಲ್ಲಿ ಘೋಷಣೆ ಮಾಡಿದ್ದಾರೆ.

ಗವಿಸಿದ್ದೇಶ್ವರ ಮಹಾ ಸ್ವಾಮೀಜಿಗಳು ಅಕ್ಟೋಬರ್ 11ಕ್ಕೆ ಮಸೂರು ದಸರಾ ಉದ್ಘಾಟಿಸಲಿದ್ದು, ಅಕ್ಟೋಬರ್ 21 ರಂದು ವಿಜಯದಸಮಿ ಜಂಬೂಸವಾರಿ



ನಡೆಯಲಿದೆ. ಅಂದು ಸಾಯಂಕಾಲ 4:10 ರ ಮೀನಾ ಲಗ್ನದಲ್ಲಿ ಜಂಬೂಸವಾರಿಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಲಿದ್ದಾರೆ.

ಈ ದಸರಾವನ್ನು ಅದ್ಧೂರಿಯ ಜೊತೆಗೆ ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ನಾಡಹಬ್ಬವನ್ನು ಆಚರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

### ದಸರಾ ಸ್ತಬ್ಧಚಿತ್ರ: ಹಲವು ಜಿಲ್ಲೆಗಳಿಗೆ ನಿರಾಶೆ

ಬೆಂಗಳೂರು: ಮೈಸೂರು ದಸರಾ ಜಂಬೂ ಸವಾರಿಯಲ್ಲಿ ಜಿಲ್ಲಾ ಸ್ತಬ್ಧಚಿತ್ರಗಳ (ಣಚಿಭಟಜಚಿಣಥ) ಭಾಗವಹಿಸುವಿಕೆಯನ್ನು ಕೇವಲ 15 ಜಿಲ್ಲೆಗಳಿಗೆ ಸೀಮಿತಗೊಳಿಸುವ ರಾಜ್ಯ ಸರ್ಕಾರದ ನಿರ್ಧಾರ ಹಲವು ಜಿಲ್ಲೆಗಳಲ್ಲಿ ನಿರಾಶೆಯನ್ನು ಮೂಡಿಸಿದೆ. ಈ ಪಟ್ಟಿಯಿಂದ ಹೊರಗುಳಿದಿರುವ ಜಿಲ್ಲೆಗಳಲ್ಲಿ ರಾಜ್ಯದ ಎರಡನೇ ಅತಿದೊಡ್ಡ ಜಿಲ್ಲೆ ಹಾಗೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ತವರು ಜಿಲ್ಲೆಯಾದ ತುಮಕೂರು ಕೂಡ ಸೇರಿದೆ.

ಸರ್ಕಾರದ ನಿರ್ಧಾರವೇ ಹೊರತು ಆಯ್ಕೆ ಸಮಿತಿಯದ್ದಲ್ಲ ಎಂದು ಸ್ಪಷ್ಟಪಡಿಸಿದರು.

"ಸ್ತಬ್ಧಚಿತ್ರಗಳನ್ನು 15 ಜಿಲ್ಲೆಗಳಿಗೆ ಸೀಮಿತಗೊಳಿಸಲು ಸರ್ಕಾರ ನಿರ್ಧರಿಸಿತ್ತು. ಆ ನಂತರ, ಪ್ರತಿಯೊಂದು ಸ್ತಬ್ಧಚಿತ್ರವೂ ವಿಶಿಷ್ಟವಾಗಿರುವುದನ್ನು ಹಾಗೂ ಆಯಾ ಜಿಲ್ಲೆಯ ಸಂಸ್ಕೃತಿ ಮತ್ತು ಪರಂಪರೆ ಸೇರಿದಂತೆ ಅದರ ವೈಶಿಷ್ಟ್ಯಗಳನ್ನು ಪ್ರತಿಬಿಂಬಿಸುವಂತೆ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಯಿತು," ಎಂದು ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷ ಮಂಜುಶ್ರೀ ತಿಳಿಸಿದ್ದಾರೆ.

## ವಿಶೇಷಚೇತನ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಕೆ ಅವಧಿ ಸೆ.30ವರೆಗೆ ವಿಸ್ತರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೇಂದ್ರ ಸರ್ಕಾರದ ನ್ಯಾಷನಲ್ ಇ–ಸ್ಕಾಲರ್‌ಶಿಪ್ ಯೋಜನೆಯಡಿ 2026–27ನೇ ಸಾಲಿನ ಪ್ರಿ–ಮೆಟ್ರಿಕ್ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಅವಧಿಯನ್ನು ಸೆ.30ರವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿಶೇಷ ಚೇತನ ವಿದ್ಯಾರ್ಥಿಗಳು ನ್ಯಾಷನಲ್ ಸ್ಕಾಲರ್‌ಶಿಪ್ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಿ ವಿದ್ಯಾರ್ಥಿವೇತನ ಸೌಲಭ್ಯದ ಪ್ರಯೋಜನ ಪಡೆದುಕೊಳ್ಳುವಂತೆಯೂ, ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲಾ ಸಂಯೋಜಕರಾದ ಪ್ರತಿಭಾ (ಮೊ: 9606151149), ವಿಜಯಪುರ ತಾಲೂಕು ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತ ರವಿ ರಾಠೋಡ (ಮೊ: 9035553337), ಸಿಂದಗಿ ತಾಲೂಕು ಮುತ್ತುರಾಜ ಸಾತಿಹಾಳ (ಮೊ: 9980019635), ಬಸವನ ಬಾಗೇವಾಡಿ ತಾಲೂಕು ಶಿವಲೀಲಾ ಬಿರಾದಾರ (ಮೊ: 8722135660), ಇಂಡಿ ತಾಲೂಕು ಪರಶುರಾಮ ಬೋಸಲೆ (ಮೊ: 9972441464) ಹಾಗೂ ಮುದ್ದೇಬಿಹಾಳ ತಾಲೂಕು ಎಸ್.ಕೆ. ಘಾಟೆ (ಮೊ: 9740682979) ಅವರನ್ನು ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕ ಯಶವಂತ್ರಾಯಗೌಡ ಪಾಟೀಲರ ರಾಜೀನಾಮೆ ಒತ್ತಡ & ರೈತರ ಹೋರಾಟಕ್ಕೆ ದೊರೆತ ಮನ್ನಣೆ । ಕೊನೆಗೂ ಸ್ಪಂದಿಸಿದ ಸರ್ಕಾರ

# ವಿಜಯಪುರ ಜಿಲ್ಲೆ ಎಲ್ಲ ತಾಲೂಕುಗಳು ಬರಪೀಡಿತವೆಂದು ಘೋಷಣೆ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಜಿಲ್ಲೆಯ ರೈತರ ಸಂಕಷ್ಟ, ಮಳೆಯ ಕೊರತೆ ಹಾಗೂ ಬೆಳೆ ನಷ್ಟದ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸುವಂತೆ ಹಲವು ತಿಂಗಳುಗಳಿಂದ ನಡೆಯುತ್ತಿದ್ದ ಒತ್ತಾಯಕ್ಕೆ ಕೊನೆಗೂ ಸರ್ಕಾರ ಸ್ಪಂದಿಸಿದೆ.

ಜಿಲ್ಲೆಯ 11 ತಾಲ್ಲೂಕುಗಳು ಬರ ಪೀಡಿತ ಎಂದು ಘೋಷಣೆ ಮಾಡಲಾಗಿತ್ತು. ಆದರೆ ಜಿಲ್ಲೆಯ ಗಡಿ ತಾಲ್ಲೂಕುಗಳಾದ ಇಂಡಿ ಹಾಗೂ ಚಡಚಣ ತಾಲ್ಲೂಕುಗಳನ್ನು ಮಾತ್ರ ಸರ್ಕಾರ ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಿರಲಿಲ್ಲ. ತಮ್ಮದೇ ಸರಕಾರದಲ್ಲಿ ತಮ್ಮ ಕ್ಷೇತ್ರದ ಸಮಸ್ಯೆ ಪರಿಹರಿಸಲು ಸಾಧ್ಯವಾಗುತ್ತಿಲ್ಲ ಎಂದು ಮನನೊಂದು ಶಾಸಕ ಯಶವಂತ್ರಾಯಗೌಡ ಪಾಟೀಲ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರು.

ಇದರ ಬೆನ್ನಲ್ಲೇ ಸರ್ಕಾರ ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಿದೆ.

ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ಭಾರೀ ಸಂಕಷ್ಟಕ್ಕೆ ಸಿಲುಕಿದ್ದರು. ಬಿತ್ತನೆ ಮಾಡಿದ ಬೆಳೆಗಳು ಒಣಗಿ ಹೋಗಿದ್ದು, ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಕೊರತೆ ಉಂಟಾಗಿತ್ತು. ಇಂಡಿ, ಚಡಚಣ ಸೇರಿದಂತೆ ಜಿಲ್ಲೆಯ ಬಹುತೇಕ



ಭಾಗಗಳಲ್ಲಿ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದವು. ಈ ಹಿನ್ನೆಲೆಯಲ್ಲಿ ರೈತ ಸಂಘಟನೆಗಳು, ವಿವಿಧ ಸಾಮಾಜಿಕ ಸಂಘಟನೆಗಳು ಹಾಗೂ ಜನಪ್ರತಿನಿಧಿಗಳು ನಿರಂತರವಾಗಿ ಬರ ಘೋಷಣೆಗೆ ಆಗ್ರಹಿಸುತ್ತಿದ್ದರು.

ರೈತರ ಪರವಾಗಿ ಹೋರಾಟ ಶಾಸಕ ಯಶವಂತರಾಯಗೌಡ ಪಾಟೀಲ ಅವರು ವಿಧಾನಸಭೆ ಹಾಗೂ ಸರ್ಕಾರದ ವಿವಿಧ ಹಂತಗಳಲ್ಲಿ ಜಿಲ್ಲೆಯ ವಾಸ್ತವ ಸ್ಥಿತಿಯನ್ನು ಪ್ರಸ್ತಾಪಿಸಿ ಬರ ಘೋಷಣೆಗೆ ಒತ್ತಾಯಿಸಿದ್ದರು. ಸರ್ಕಾರ ತ್ವರಿತ ಕ್ರಮ ಕೈಗೊಳ್ಳದಿದ್ದರೆ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವುದಾಗಿ ಘೋಷಿಸಿ ಹೋರಾಟದ ಕಾವು ಹೆಚ್ಚಿಸಿದ್ದರು. ಈ ಬೆಳವಣಿಗೆ ರಾಜ್ಯ ರಾಜಕೀಯ ವಲಯದಲ್ಲೂ ಸಾಕಷ್ಟು ಚರ್ಚೆಗೆ ಕಾರಣವಾಗಿತ್ತು.

ಜಿಲ್ಲೆಯ ಪರಿಸ್ಥಿತಿಯನ್ನು ಮರುಪರಿಶೀಲಿಸಿದ ರಾಜ್ಯ ಸರ್ಕಾರ ಇಂಡಿ, ಚಡಚಣ ಸೇರಿದಂತೆ ವಿಜಯಪುರ ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿದೆ. ಈ ಘೋಷಣೆಯಿಂದ ರೈತರಿಗೆ ವಿವಿಧ ರೀತಿಯ ಪರಿಹಾರ ಸೌಲಭ್ಯಗಳು ದೊರೆಯುವ ನಿರೀಕ್ಷೆ ಮೂಡಿದೆ.

ಜಿಲ್ಲೆಯ ಜನಪ್ರತಿನಿಧಿಗಳು, ರೈತ ಸಂಘಟನೆಗಳು ಹಾಗೂ ಸಾರ್ವಜನಿಕರ ನಿರಂತರ ಹೋರಾಟದ ಫಲವಾಗಿ ವಿಜಯಪುರ ಜಿಲ್ಲೆ ಕೊನೆಗೂ ಬರಪೀಡಿತ ಜಿಲ್ಲೆಯ ಪಟ್ಟಿಗೆ ಸೇರ್ಪಡೆಯಾಗಿದ್ದು, ಇದೀಗ ಸರ್ಕಾರದ ನೆರವು ರೈತರ ಮನೆಬಾಗಿಲಿಗೆ ತಲುಪುವ ನಿರೀಕ್ಷೆ ಮೂಡಿದೆ.

### ರೈತರಲ್ಲಿ ಸಂತಸ

ಬರ ಘೋಷಣೆಯ ಸುದ್ದಿಯಿಂದ ಜಿಲ್ಲೆಯ ರೈತರಲ್ಲಿ ಸಂತಸ ವ್ಯಕ್ತವಾಗಿದೆ. ಬರ ಪರಿಹಾರ, ಬೆಳೆ ನಷ್ಟ ಪರಿಹಾರ, ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚಿನ ಕೆಲಸದ ದಿನಗಳು ಹಾಗೂ ಜಾನುವಾರುಗಳಿಗಾಗಿ ಮೇವು–ನೀರಿನ ವ್ಯವಸ್ಥೆ ಸೇರಿದಂತೆ ಸರ್ಕಾರದಿಂದ ಹೆಚ್ಚಿನ ನೆರವು ದೊರೆಯುವ ನಿರೀಕ್ಷೆಯನ್ನು ರೈತರು ವ್ಯಕ್ತಪಡಿಸಿದ್ದಾರೆ. ಬರ ಘೋಷಣೆ ಮಾತ್ರ ಸಾಕಾಗುವುದಿಲ್ಲ. ರೈತರಿಗೆ ಶೀಘ್ರ ಪರಿಹಾರ ವಿತರಣೆ, ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರುಗಳಿಗೆ ಮೇವು ಪೂರೈಕೆ ಹಾಗೂ ಕೃಷಿ ಸಾಲ ಮರುಪಾವತಿಗೆ ವಿನಾಯಿತಿ ಸೇರಿದಂತೆ ಅಗತ್ಯ ಕ್ರಮಗಳನ್ನು ಸರ್ಕಾರ ಕೈಗೊಳ್ಳಬೇಕೆಂದು ರೈತ ಸಂಘಟನೆಗಳು ಆಗ್ರಹಿಸಿವೆ.

## ಧುಮಕನಾಳ ಗ್ರಾಮದ ಮುಸ್ಲಿಂ ಕಮಿಟಿಯಿಂದ ತಹಶೀಲ್ದಾರ್‌ಗೆ ಮನವಿ

# ಖಬರಸ್ತಾನ್ ಜಮೀನು ಒತ್ತುವರಿ ತೆರವಿಗೆ ಆಗ್ರಹ


■ ಉದಯರಶ್ಮಿ ದಿನಪತ್ರಿಕೆ

ಚಡಚಣ: ತಾಲೂಕಿನ ಧುಮಕನಾಳ ಗ್ರಾಮದಲ್ಲಿರುವ ಮುಸ್ಲಿಂ ಖಬರಸ್ತಾನ್ ಜಮೀನು ಒತ್ತುವರಿಯಾಗುತ್ತಿದೆ ಎಂದು ಆರೋಪಿಸಿ, ಕೂಡಲೇ ಒತ್ತುವರಿ ತೆರವುಗೊಳಿಸಿ ಜಮೀನಿನ ಹದ್ದುಬಸ್ತು ಮಾಡಬೇಕು ಎಂದು ಆಗ್ರಹಿಸಿ ಧುಮಕನಾಳ ಮುಸ್ಲಿಂ ಕಮಿಟಿ ಸದಸ್ಯರು ಗುರುವಾರ ಚಡಚಣ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ತಹಶೀಲ್ದಾರ್ ಪರವಾಗಿ ರವಿಕುಮಾರ ಎಸ್. ಚವ್ಹಾಣ ಅವರು ಮನವಿ ಸ್ವೀಕರಿಸಿ, ಈ ಕುರಿತು ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಖಬರಸ್ತಾನ್ ಜಮೀನು ಬಹುದಿನಗಳಿಂದ ನಿರಂತರವಾಗಿ ಅತಿಕ್ರಮಣಕ್ಕೊಳಗಾಗುತ್ತಿದೆ. ಇದರಿಂದ ಮುಂದಿನ ದಿನಗಳಲ್ಲಿ ಗ್ರಾಮಸ್ಥರಿಗೆ ಸಮಸ್ಯೆಯಾಗುವ ಸಾಧ್ಯತೆಯಿದ್ದು, ಕೂಡಲೇ ಸ್ಥಳ ಪರಿಶೀಲನೆ ನಡೆಸಿ ಅತಿಕ್ರಮಣ ತೆರವುಗೊಳಿಸಬೇಕು. ಅಲ್ಲದೆ, ಸರ್ಕಾರಿ ದಾಖಲೆಗಳ ಆಧಾರದ ಮೇಲೆ ಜಮೀನಿನ ಹದ್ದುಬಸ್ತು ಗುರುತಿಸಿ, ಗಡಿ ಸಂರಕ್ಷಣೆ ಮಾಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

"ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು": ಇತ್ತೀಚೆಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಸ್ಮಶಾನ ಭೂಮಿಗಳ ಸಂರಕ್ಷಣೆ ಕುರಿತು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಸ್ಮಶಾನಕ್ಕೆ ಜಾಗ ಸಿಗುವುದು ಕಷ್ಟವಾಗಿದ್ದು, ಇರುವ ಜಾಗವನ್ನು ಹದ್ದುಬಸ್ತು ಮಾಡಿ ಸಂರಕ್ಷಿಸಬೇಕು.




ಒತ್ತುವರಿಯಾಗಿದ್ದರೆ ತಕ್ಷಣ ತೆರವುಗೊಳಿಸಿ, ಗಡಿ ಗುರುತು ಮಾಡಿ ತಂತಿಬೇಲಿ ಅಳವಡಿಸಬೇಕು. ಈ ವಿಚಾರದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿರುವುದಾಗಿ ಗ್ರಾಮದ ಹಿರಿಯ ಲಾಲಸಾಬ ಜಮಾದಾರ ಹೇಳಿದರು.

ಜಿಲ್ಲಾಧಿಕಾರಿಗಳ ಸೂಚನೆಯ ಬೆನ್ನಲ್ಲೇ ಧುಮಕನಾಳ ಗ್ರಾಮದಲ್ಲಿ ಖಬರಸ್ತಾನ್ ಜಮೀನು ಸಂರಕ್ಷಿಸುವಂತೆ ಮನವಿ ಸಲ್ಲಿಸಲಾಗಿದೆ. ಇದೀಗ ತಾಲೂಕು ಆಡಳಿತ ಯಾವ ರೀತಿಯ ಕ್ರಮ ಕೈಗೊಳ್ಳಲಿದೆ ಎಂಬುದನ್ನು ಗ್ರಾಮಸ್ಥರು ಎದುರು ನೋಡುತ್ತಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಲಾಲಸಾಬ ಜಮಾದಾರ, ಅಬುಸಾಬ ಶೇಖ, ಇಬ್ರಾಹಿಂ ವಾಲಿಕಾರ, ಮೋದಿಸನಸಾಬ ವಾಲಿಕಾರ, ಡಾ. ಹುಸೇನಿ ಮುಲ್ಲಾ, ಮಹಿಬೂಬ ವಾಲಿಕಾರ, ಹಾಸಿಂಪೀರ್ ವಾಲಿಕಾರ, ಮೀರಾಸಾಬ ಶೇಖ, ಮುಸ್ತಾಕ್ ಮುಲ್ಲಾ, ರಜಾಕ್ ಶೇಖ, ಹುಸೇನ ಶೇಖ, ಅಪ್ಪು ಶೇಖ, ರಹಿಮಾನ ಶೇಖ, ಬಂದಗಿಸಾಬ ಶೇಖ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

# ‘ಶ್ರಮದ ಅನ್ನ’ದ ಪರಿಕಲ್ಪನೆ ಪಾಲಿಸಬೇಕಿದೆ




ಸಂತೋಷ್ ರಾವ್ ಪೆರ್ಮುಡ.
ಪಟ್ರಮೆ ಗ್ರಾಮ ಮತ್ತು ಅಂಚೆ,
ಬೆಳ್ತಂಗಡಿ ತಾಲೂಕು, ದ.ಕ ಜಿಲ್ಲೆ

■ ಉದಯರಶ್ಮಿ ದಿನಪತ್ರಿಕೆ

ದೇಶವು ಜಾಗತಿಕವಾಗಿ ಅಭಿವೃದ್ಧಿಯೆಡೆಗೆ ಸಾಗುತ್ತಿದ್ದಂತೆ ಮನುಷ್ಯನ ಆಯಸ್ಸು ಪ್ರತಿದಿನವೂ ಕಡಿಮೆಯಾಗುತ್ತಾ ಹೋಗುತ್ತಿದೆ. ಇದಕ್ಕೆ ಪ್ರಮುಖ ಕಾರಣ ಅಸಮರ್ಪಕ ಜೀವನಶೈಲಿ.

ಸಾಮಾಜಿಕವಾಗಿ ಬೆಳೆದಂತೆ, ತಂತ್ರಜ್ಞಾನ ಕ್ಷೇತ್ರದಲ್ಲಿನ ಅಭಿವೃದ್ಧಿ ಮತ್ತು ದಿನ ದಿನವೂ ಬದಲಾಗುತ್ತಿರುವ ಹವಾಮಾನದ ಕಾರಣದಿಂದ ಮನುಷ್ಯನ ಆರೋಗ್ಯ ಮತ್ತು ಜೀವಿತಾವಧಿಯು ಕಡಿಮೆಯಾಗುತ್ತಿದೆ. ಹಿಂದೆ 40–50 ವರ್ಷ ದಾಟಿದವರು ತಮ್ಮ ಪೋಷಕರನ್ನು ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದುಕೊಂಡು ಬರುತ್ತಿದ್ದರೆ, ಇಂದು ಅದೇ ವಯಸ್ಸಿನ ಹೆತ್ತವರು ತಮ್ಮ ಮಕ್ಕಳನ್ನು ಅನಾರೋಗ್ಯದ ಕಾರಣದಿಂದಾಗಿ ಆಸ್ಪತ್ರೆಗಳಿಗೆ ಕರೆದುಕೊಂಡು ಬರುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಇಂದಿನ ಮಕ್ಕಳಂತೂ ಬಾಲ್ಯದಿಂದಲೇ ಟಿ.ವಿಯ ದಾಸರಾಗಿ ತಮ್ಮ ಆರೋಗ್ಯವನ್ನು ಎಳವೆಯಿಂದಲೇ ಕಳೆದುಕೊಳ್ಳುತ್ತಿದ್ದಾರೆ. ಇದು ‘ದುಡ್ಡು ಕೊಟ್ಟು ಮಾರಿಯನ್ನು ಮನೆಗೆ ಕರೆತಂದಂತೆ.’ ಒಂದೆರಡು ಗಂಟೆಗಳ ಕಾಲ ನಿರಂತರವಾಗಿ ಟಿ.ವಿಯ ಮುಂದೆ ಕುಳಿತಿರುವುದು ಮತ್ತು ಒಂದು ಸಿಗರೇಟನ್ನು ಸೇದುವುದೂ ಸಮಾನ ಎಂದು ಮತ್ತು ನಿರಂತರವಾಗಿ ನಾಲ್ಕು ಗಂಟೆ ಕುಳಿತಲ್ಲೇ ಕುಳಿತಿದ್ದರೆ ಆತನ ಜೀವನದ ಇಪ್ಪತ್ತು ನಿಮಿಷ ಆಯಸ್ಸು ಕಡಿಮೆಯಾದಂತೆ ಎಂದು ಹೃದ್ರೋಗ ತಜ್ಞ ಡಾ.ಮಂಜುನಾಥ್ ಹೇಳುತ್ತಾರೆ.



ಮೊಬೈಲ್, ಟಿವಿ ಮತ್ತು ಕಂಪ್ಯೂಟರ್‌ನ ಅತಿಯಾದ ಗೀಳು ಒಂದು ರೀತಿಯಲ್ಲಿ ಖಾಯಿಲೆಯಲ್ಲದೆ ಇನ್ನೇನೂ ಅಲ್ಲ. ಇದೊಂದು ಖಾಯಿಲೆಯೆಂದು ಬಹುತೇಕ ರಾಷ್ಟ್ರಗಳು ಈಗಾಗಲೇ ಘೋಷಿಸಿವೆ. ಇದು ಭಾರತ ದೇಶದಲ್ಲಿ ಅತ್ಯಂತ ವೇಗವಾಗಿ ಹಬ್ಬುತ್ತಿದೆ. ಮಹಿಳೆಯರ ಜೀವಾಂಗ ರಚನೆ ಮತ್ತು ಜೀವಶಾಸ್ತ್ರದ ಪ್ರಕಾರ ಬಹುತೇಕ ಮಹಿಳೆಯರಿಗೆ ಹೃದಯ ಸಂಬಂಧಿ ರೋಗಗಳು ಬರುವುದಿಲ್ಲವೆಂದು ವಿಜ್ಞಾನ ಹೇಳುತ್ತದೆ. ಆದರೆ ಇಂದಿನ ಜೀವನ ಶೈಲಿ, ಆಹಾರ ಕ್ರಮಗಳು ಮತ್ತು ಕಠಿಣ ಪರಿಶ್ರಮದ ಕೆಲಸಗಳನ್ನು ಮಾಡದ ಕಾರಣದಿಂದ ಮಹಿಳೆಯರಿಗೂ ಹೃದಯ ಸಂಬಂಧಿ ಕಾಯಿಲೆಗಳು ಹೆಚ್ಚುತ್ತಿದೆ. ಪಟ್ಟಣಗಳಲ್ಲಷ್ಟೇ ಬೀಡು ಬಿಟ್ಟಿದ್ದ ಹೃದಯಾಘಾತ ಮತ್ತು ಸಕ್ಕರೆ ಕಾಯಿಲೆಗಳು ಇಂದು ಹಳ್ಳಿಗಳಲ್ಲೂ ವ್ಯಾಪಿಸಿರುವುದು ದುರಂತವಲ್ಲದೆ ಮತ್ತೇನಲ್ಲ.

ಇಂದು ಪಟ್ಟಣಗಳಲ್ಲಂತೂ ವಾಯು ಮಾಲಿನ್ಯ ಮತ್ತು ಜಲಮಾಲಿನ್ಯದ ಪ್ರಭಾವವನ್ನು ಹೇಳತೀರದು. ಈ ಕಾರಣಗಳಿಂದ ನಿತ್ಯ ಪ್ರಾಪಂಚಿಕವಾಗಿ ಲೆಕ್ಕವಿಲ್ಲದಷ್ಟು ಮಕ್ಕಳು ಸಾಯುತ್ತಿದ್ದಾರೆ. ದೇಶದ ರಾಜಧಾನಿಯಾದ ದೆಹಲಿಯನ್ನಂತೂ ವಾಯುಮಾಲಿನ್ಯದ ಕಾರಣದಿಂದ ಗ್ಯಾಸ್ ಛೇಂಬರ್ ಎಂದು ಸುಪ್ರೀಂ ಕೋರ್ಟ್ ಜರೆದಿದ್ದು ನಮಗೆಲ್ಲ ಗೊತ್ತೇ ಇದೆ. ನಮ್ಮ ದೇಶವು ಶ್ರಮರಹಿತ ಜೀವನದಿಂದಾಗಿ ಮತ್ತು ದೇಹಕ್ಕೆ ದೈಹಿಕ ವ್ಯಾಯಾಮಗಳಿಲ್ಲದೇ ಮಧುಮೇಹ ಖಾಯಿಲೆಯ ರಾಜಧಾನಿಯಾಗಿದ್ದು, ಇನ್ನು ಕೆಲವೇ ವರ್ಷಗಳಲ್ಲಿ ನಮ್ಮ ಜೀವನ ಶೈಲಿಯು ಹೀಗೇ ಮುಂದುವರೆದರೆ ಹೃದಯಾಘಾತದ ರಾಜಧಾನಿಯೂ ಆಗಿ ಹೊರಹೊಮ್ಮಲಿದೆ.



ಇಂದಿನ ಪೀಳಿಗೆ ‘ಕಡಿಮೆ ಶ್ರಮ ಹೆಚ್ಚಿನ ಸಂಬಳ’ಎನ್ನುವ ವ್ಯವಸ್ಥೆಗೆ ಜೋತುಬಿದ್ದಿದ್ದು, ಇದರಿಂದಾಗಿ ಒತ್ತಡದ ಕೆಲಸಗಳ ಹಿಂದೆ ಬಿದ್ದು ಗಳಿಸಿದ ಹಣವನ್ನೆಲ್ಲಾ ಆರೋಗ್ಯ ಸರಿಪಡಿಸಿಕೊಳ್ಳಲು ವ್ಯಯಿಸುತ್ತಿರುವುದು ದುರಂತವೇ ಸರಿ. ಬದಲಿಗೆ ಗಾಂಧೀಜಿ ಬೋಧಿಸಿ ಅನುಷ್ಠಾನಿಸಿದ ‘ಶ್ರಮದ ಅನ್ನ’ದ ಪರಿಕಲ್ಪನೆಯನ್ನು ನಾವೆಲ್ಲರೂ ಪಾಲಿಸಬೇಕಿದೆ. ಬೆವರು ಹರಿಸಿ ದುಡಿದರೆ ಮಾತ್ರ ಆ ದಿನ ತಾನು ಊಟ ಮಾಡುವೆ ಎಂಬ ನಿಯಮವನ್ನು ಪಾಲಿಸುವುದು ಆರೋಗ್ಯದ ದೃಷ್ಟಿಯಿಂದ ಉತ್ತಮ. ಮನುಷ್ಯನು ಆಲಸಿಯಾಗದೇ ಫಾಸ್ಟ್‌ಫುಡ್ ವ್ಯಾಮೋಹದಿಂದ ಹೊರಬಂದು ದೇಹಕ್ಕೆ ಅಗತ್ಯವಿರುವ ಎಲ್ಲ ಪೋಷಕಾಂಶಗಳಿರುವ ಆಹಾರ ಕ್ರಮಗಳನ್ನು ಅಳವಡಿಸಿಕೊಳ್ಳಬೇಕು, ಅತಿಯಾದ ಮಾಂಸಾಹಾರವೂ ದೇಹಕ್ಕೆ ಒಳ್ಳೆಯದಲ್ಲ ಎನ್ನುವುದನ್ನು ಅರಿಯಬೇಕು. ಇದ್ದದ್ದರಲ್ಲಿ ಖುಷಿಯಾಗಿ ಜೀವಿಸಿ ಎಲ್ಲರೊಂದಿಗೆ ಸಹಬಾಳ್ವೆ ನಡೆಸುತ್ತಾ, ಸರಳ ಜೀವನದ ಮೂಲಕ ತಕ್ಕಮಟ್ಟಿಗೆ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು.




# ಶಿವಾನಂದ ತಗಡೂರ ಗೆ ನಾಟಕ ಅಕಾಡೆಮಿ ಪ್ರಶಸ್ತಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರು, ಹಿರಿಯ ಪತ್ರಕರ್ತರು ಹಾಗೂ ರಂಗಕರ್ಮಿ ಶಿವಾನಂದ ತಗಡೂರು ಅವರಿಗೆ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಯನ್ನು ವಿಧಾನ ಪರಿಷತ್ ಉಪಸಭಾಪತಿ ಉಮಾಶ್ರೀ ಅವರು ಪ್ರದಾನ ಮಾಡಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಉಮಾಶ್ರೀ, “ರಂಗಭೂಮಿ ಯಾವ ಕಾಲಕ್ಕೂ ತನ್ನ ಜೀವಂತಿಕೆಯನ್ನು ಕಳೆದುಕೊಳ್ಳುವುದಿಲ್ಲ. ನಾನೂ ಕೂಡ ರಂಗಭೂಮಿ ಕಲಾವಿದೆಯಾಗಿ ಬೆಳೆದು ಈ ಎತ್ತರದ ಸ್ಥಾನಕ್ಕೆ ಬಂದಿದ್ದೇನೆ. ರಂಗಭೂಮಿಯ ಮೂಲಕ ಬೆಳೆದು ಬಂದಿರುವ ಎಲ್ಲ ಕಲಾವಿದರಿಗೂ ರಾಜ್ಯ ಸರ್ಕಾರದ ಪರವಾಗಿ ಅಭಿನಂದನೆಗಳು” ಎಂದು ಹೇಳಿದರು.

ಸಮಾರಂಭದಲ್ಲಿ ಹಿರಿಯ ನಟ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಮುಖ್ಯಮಂತ್ರಿ ಚಂದ್ರು, ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜಮೂರ್ತಿ,ಕನ್ನಡಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮುಕುಂದರಾಜ್, ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ. ಕಪ್ಪಣ್ಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ. ವಸುಂಧರಾ ಹಾಗೂ ರಿಜಿಸ್ಟ್ರಾರ್ ನೀಲಮ್ಮ, ಶೇಖ್ ಮಾಸ್ತರ ಉಪಸ್ಥಿತರಿದ್ದರು. ಸಮಾರಂಭದಲ್ಲಿ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಗಳು ಹಾಗೂ ವಿವಿಧ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.






# ಸೆ.28 ರಂದು ರಾಠೋಡ ಜಾತ್ರಾಮಹೋತ್ಸವ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ಕೇಸರಾಳ ತಾಂಡಾದ ಶಂಕರ ಚಾಂದುಬಾಯಿ ಕಾಲೋನಿಯಲ್ಲಿ ಸೆಪ್ಟೆಂಬರ್ 28ರಂದು ಮಧ್ಯಾಹ್ನ 3:00 ಗಂಟೆಗೆ ದಿ॥ ಶ್ರೀಶಂಕರ ಬಿ. ರಾಠೋಡ ಹಾಗೂ ದಿ॥ ಶ್ರೀಮತಿ ಚಾಂದುಬಾಯಿ ಶಂ. ರಾಠೋಡ ಅವರ ಜಾತ್ರಾಮಹೋತ್ಸವ ಹಾಗೂ ತಾಲೂಕಾ ಬಂಜಾರ ಸಮಾಜದ ವತಿಯಿಂದ ಸಕ್ಕರೆ ಮತ್ತು ಜವಳಿ ಸಚಿವ ರುದ್ರಪ್ಪ ಲಮಾಣಿ ಅವರಿಗೆ ಅದ್ದೂರಿ ಪಕ್ಷಾತೀತ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸೋಮದೇವರಹಟ್ಟಿಯ ಶ್ರೀ ಜಗನು ಮಹಾರಾಜರು ತಿಳಿಸಿದರು.

ಬುಧವಾರ ಕೇಸರಾಳ ಎಲ್.ಟಿ.ಯಲ್ಲಿ ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಜಾತ್ರಾಮಹೋತ್ಸವ ಹಾಗೂ ಸನ್ಮಾನ ಕಾರ್ಯಕ್ರಮವು ಇಡೀ ಬಂಜಾರ ಸಮುದಾಯದ ಒಗ್ಗಟ್ಟಿನ ಪ್ರದರ್ಶನವಾಗಿದೆ. ಬಂಜಾರ ಸಮುದಾಯದ ಹೆಮ್ಮೆಯ ನಾಯಕರಾದ ಸಚಿವ ರುದ್ರಪ್ಪ ಲಮಾಣಿ ಅವರನ್ನು ಪಕ್ಷಾತೀತವಾಗಿ ಗೌರವಿಸುವ ಮೂಲಕಸಮುದಾಯದಲ್ಲಿನಾವೆಲ್ಲರೂಒಂದೇ ಕುಟುಂಬ ಎಂಬ ಭಾವನೆ ಮೂಡಿಸುವುದು ಇದರ ಮುಖ್ಯ ಉದ್ದೇಶ ಎಂದರು.

ಮುಖಂಡ ಭೀಮುಸೇತ ಮಾತನಾಡಿ, ಸೋಮದೇವರಹಟ್ಟಿಯ ಜಗನು ಮಹಾರಾಜರು ಹಾಗೂ ಪ್ರಕಾಶ ಮಹಾರಾಜರ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಸಚಿವ ರುದ್ರಪ್ಪ ಲಮಾಣಿ ನೆರವೇರಿಸಲಿದ್ದು, ಶಾಸಕ ಯಶವಂತರಾಯಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಸದ ರಮೇಶ ಜಿಗಜಿಣಗಿ ಜ್ಯೋತಿ ಬೆಳಗಿಸಲಿದ್ದು, ಮಾಜಿ ಸಂಸದ ಉಮೇಶ ಜಾಧವ, ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಭೀಮಣ್ಣಾ ಕೌಲಗಿ, ಉದ್ಯಮಿ ಶಂಕರ ಪವಾರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಅಂದು ರಾತ್ರಿ ಸೋನುಡೈಮಂಡ್ ಮೆಲೋಡಿಸ್ ತಂಡದಿಂದ ಜಾನಪದ ಗಾಯನ ಹಾಗೂ ಗೀತಾಂಜಲಿಬಾಯಿ ಮತ್ತು ಫುಲಸಿಂಗ ರಾಠೋಡ ಅವರಿಂದ ಹಾಸ್ಯ ಕಾರ್ಯಕ್ರಮ ನಡೆಯಲಿದೆ ಎಂದರು.

ಬಂಜಾರ ಸಂಘದ ಸಂಜು ಚವ್ಹಾಣ, ಲಿಂಬಾಜಿ ರಾಠೋಡ, ವಿಜಯಕುಮಾರ ರಾಠೋಡ, ಗಣಪತಿ ರಾಠೋಡ ಹಾಗೂ ಕಾಶೀನಾಥ ಪವಾರ ಮಾತನಾಡಿ, ಇಡೀ ರಾಜ್ಯವೇ ಹೆಮ್ಮೆ ಪಡುವಂತೆ ಬಂಜಾರ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿಸಿದರು. ಪತ್ರಿಕಾಗೋಷ್ಠಿಯಲ್ಲಿ ಧರ್ಮು ರಾಠೋಡ, ಸುಭಾಷ ತೋರತ್, ಅಪ್ಪು ಪವಾರ, ಸಿದ್ದು ರಾಠೋಡ ಉಪಸ್ಥಿತರಿದ್ದರು.

ವಿಜಯಪುರದಲ್ಲಿ ನಡೆದ ವಿಶ್ವ ಆಲ್ಝೈಮರ್ಸ್ ದಿನಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ ಡಿಎ ಡಾ.ಮಲ್ಲನಗೌಡ ಬಿರಾದಾರ ಅಭಿಮತ

# ಆಲ್ಝೈಮರ್ಸ್ ಕಾಯಿಲೆ ನಿಯಂತ್ರಣ ಪ್ರತಿಯೊಬ್ಬರ ಹೊಣೆಗಾರಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಡಿಮೆನ್ಷಿಯಾ (ಆಲ್ಝೈಮರ್ಸ್) ಕಾಯಿಲೆಯನ್ನು ನಿಯಂತ್ರಿಸುವುದು ಮತ್ತು ತಡೆಯುವುದು ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಲ್ಲನಗೌಡ ಬಿರಾದಾರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ವಾರ್ತಾ ಮತ್ತು ಸಂಪರ್ಕ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಸ್ಪತ್ರೆಯ ಆವರಣದಲ್ಲಿರುವ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಆಲ್ಝೈಮರ್ಸ್ ದಿನಾಚರಣೆ ಜನಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ನಿಟ್ಟಿನಲ್ಲಿ ಎಷ್ಟು ಬೇಗ ತಿಳಿಯುತ್ತದೆಯೋ, ಅಷ್ಟು ಆರೈಕೆ ಸಾಧ್ಯ ಎಂಬ ಘೋಷವಾಕ್ಯದೊಂದಿಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಗತ್ಯ ಎಂದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ಅರ್ಚನಾ ಕುಲಕರ್ಣಿ ಸಾರ್ವಜನಿಕರು ಮೆದುಳಿನ ಆರೋಗ್ಯದ ಬಗ್ಗೆ ಭಯಪಡುವ ಅಗತ್ಯವಿಲ್ಲ. ಜಿಲ್ಲಾ ಆಸ್ಪತ್ರೆಯಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದಡಿ ಉಚಿತ ಚಿಕಿತ್ಸೆ ಹಾಗೂ ಆಪ್ತಸಮಾಲೋಚನೆ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮನೋರೋಗ ತಜ್ಞ ಡಾ. ಮಂಜುನಾಥ ಮಸಳಿ ಮಾತನಾಡಿ, ಆಲ್ಝೈಮರ್ಸ್ ಹಾಗೂ ವಿವಿಧ ಮೆದುಳು ಆರೋಗ್ಯ ಸಮಸ್ಯೆಗಳಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಪರಿಹಾರ ಪಡೆದುಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಡಾ. ಯಶವಂತಗೌಡ ಪಾಟೀಲ, ಡಾ. ವಿ. ಜಿ. ಸತ್ತಿಕರ್, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕ ಎನ್. ಆರ್. ರಾಠೋಡ, ಆನಂದ್. ಜಿ ತಾಲೂಕು ಆರೋಗ್ಯ ಕ್ಷೇತ್ರ ಶಿಕ್ಷಣಾಧಿಕಾರಿ ಬಾಗವಾನ, ಐ.ಇ.ಸಿ ವಿಭಾಗದ ಹಾಗೂ ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.




# ಸೆ.24ರಂದು 15 ಗ್ರಾಮಗಳಲ್ಲಿ ಪಿಂಚಣಿ ಅದಾಲತ್

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಪಿಂಚಣಿದಾರರ ಅಹವಾಲುಗಳನ್ನು ಆಲಿಸಿ ಅರ್ಹ ಫಲಾನುಭವಿಗಳಿಗೆ ಪಿಂಚಣಿ ಮಂಜೂರು ಮಾಡುವ ಉದ್ದೇಶದಿಂದ ಜಿಲ್ಲೆಯ ವಿವಿಧ 15 ಗ್ರಾಮಗಳಲ್ಲಿ ಸೆ.24ರಂದು ಬೆಳಿಗ್ಗೆ 11 ಗಂಟೆಗೆ ಪಿಂಚಣಿ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ವಿಜಯಪುರ ಉಪ ವಿಭಾಗಾಧಿಕಾರಿಗಳು ತಿಕೋಟಾ ತಾಲೂಕಿನ ಸಿದ್ದಾಪೂರ ಕೆ. ಗ್ರಾಮದ ಸಮುದಾಯ ಭವನದಲ್ಲಿ,ಇಂಡಿ ಉಪ ವಿಭಾಗಾಧಿಕಾರಿಗಳು ಅವರು ಆಲಮೇಲ ತಾಲೂಕಿನ ಕಣ್ಣಿ ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ವಿಜಯಪುರ ತಹಶೀಲ್ದಾರ ಗ್ರೇಡ್-2 ಅವರು ಕಗ್ಗೋಡ ಗ್ರಾಮದ ಬಸವೇಶ್ವರ ದೇವಸ್ಥಾನದಲ್ಲಿ, ತಿಕೋಟಾ ತಹಶೀಲ್ದಾರ ಗ್ರೇಡ್-2 ಅವರು ಸಿದ್ಧಾಪೂರ (ಅ) ಗ್ರಾಮದ ಸಮುದಾಯ ಭವನದಲ್ಲಿ ಹಾಗೂ ಬಬಲೇಶ್ವರ ತಹಶೀಲ್ದಾರ ಗ್ರೇಡ್-2 ಅವರು ಸಾರವಾಡ ಗ್ರಾಮದ ಗ್ರಾಮ ಚಾವಡಿಯಲ್ಲಿ ಬೆಳಿಗ್ಗೆ 11 ಗಂಟೆಗೆ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಬಸವನಬಾಗೇವಾಡಿ ತಹಶೀಲ್ದಾರ ಗ್ರೇಡ್-2 ಅವರು ಕಾನ್ನಾಳ ಗ್ರಾಮದ ಹನುಮಂತ ದೇವಸ್ಥಾನದಲ್ಲಿ,ನಿಡಗುಂದಿ ತಹಶೀಲ್ದಾರ ಅವರು ಆಕಳವಾಡಿ ಗ್ರಾಮದ ಹನುಮಾನ ದೇವಸ್ಥಾನದಲ್ಲಿ, ಕೊಲ್ಹಾರ ತಹಶೀಲ್ದಾರ ಅವರು ಚಿಕ್ಕಗರಸಂಗಿ ಗ್ರಾಮದ ಮಾರುತೇಶ್ವರ ದೇವಸ್ಥಾನದಲ್ಲಿ, ಮುದ್ದೇಬಿಹಾಳ ತಹಶೀಲ್ದಾರ ಅವರು ವನಕಿಹಾಳ ಗ್ರಾಮದ ಮಾರುತೇಶ್ವರ ದೇವಸ್ಥಾನದಲ್ಲಿ ಹಾಗೂ ತಾಳಿಕೋಟೆ ತಹಶೀಲ್ದಾರ ಅವರು ಮಸ್ಕನಾಳ ಗ್ರಾಮದ ಮಾರುತಿ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಇಂಡಿ ತಹಶೀಲ್ದಾರ ಅವರು ಶಿರಶ್ಯಾಡ ಗ್ರಾಮದ ಗ್ರಾಮ ಪಂಚಾಯತಿಯಲ್ಲಿ, ಚಡಚಣ ತಹಶೀಲ್ದಾರ ಅವರು ಹಾವಿನಾಳ ಗ್ರಾಮದ ಬೀರಲಿಂಗೇಶ್ವರ ದೇವಸ್ಥಾನದಲ್ಲಿ, ಸಿಂದಗಿ ತಹಶೀಲ್ದಾರ ಅವರು ಡಂಬಳ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ, ದೇವರಹಿಪ್ಪರಗಿ ತಹಶೀಲ್ದಾರ ಅವರು ಕಡ್ಲೇವಾಡ ಪಿ.ಸಿ.ಎಚ್. ಗ್ರಾಮದ ಬಸವೇಶ್ವರ ದೇವಸ್ಥಾನದಲ್ಲಿ ಹಾಗೂ ಆಲಮೇಲ ತಹಶೀಲ್ದಾರ ಅವರು ಮಲಘಾಣ ಗ್ರಾಮದ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ. ಅದಾಲತ್ ನಡೆಯುವ ಗ್ರಾಮಗಳ ಸಾಮಾಜಿಕ ಭದ್ರತಾ ಯೋಜನೆಯಡಿ ವಿವಿಧ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳಿಗೆ ಇನ್ನು ಮುಂದೆ ನೇರ ಹಣ ವರ್ಗಾವಣೆ ಮೂಲಕ ಪಿಂಚಣಿ ಪಾವತಿಸಲು ಸರ್ಕಾರ ನಿರ್ಧರಿಸಿರುವ ಹಿನ್ನೆಲೆಯಲ್ಲಿ, ಸಂಬಂಧಿಸಿದ ಬ್ಯಾಂಕ್ ಹಾಗೂ ಅಂಚೆ ಕಚೇರಿ ಅಧಿಕಾರಿಗಳ ಸಹಯೋಗದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಪಿಂಚಣಿ ಫಲಾನುಭವಿಗಳು ತಮ್ಮ ಅಹವಾಲು ಹಾಗೂ ಅಗತ್ಯ ದಾಖಲೆಗಳೊಂದಿಗೆ ಅದಾಲತ್‌ನಲ್ಲಿ ಭಾಗವಹಿಸಿ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ. ಪಿಂಚಣಿ ಅದಾಲತ್‌ಗೆ ಸಂಬಂಧಿಸಿದ ಗ್ರಾಮಗಳ ಪಿಂಚಣಿದಾರರ ಮಾಹಿತಿಯೊಂದಿಗೆ ಗ್ರಾಮ ಲೆಕ್ಕಿಗರು, ಪಂಚಾಯತ್ ಕಾರ್ಯದರ್ಶಿಗಳು,ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅಂಚೆ ಸಿಬ್ಬಂದಿ ಕಡ್ಡಾಯವಾಗಿ ಹಾಜರಿರಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷ್ಣಾ ಕೊಳ್ಳದ ಜನಪ್ರತಿನಿಧಿಗಳು ಎಚ್ಚೆತ್ತುಕೊಳ್ಳಲಿ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಆಲಮಟ್ಟಿ ಜಲಾಶಯದ ಮಟ್ಟವನ್ನು 519.60 ಮೀ. ನಿಂದ 524.256 ಮೀ. ಹೆಚ್ಚಿಸಿ, ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣದ ತೀರ್ಪಿನಂತೆ ಆಲಮಟ್ಟಿ 3ನೇ ಹಂತದ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಜಲತಜ್ಞ ರಾಜೇಂದ್ರ ಪೊದ್ದಾರ ಆಗ್ರಹಿಸಿದರು.

ಆಲಮಟ್ಟಿಯಲ್ಲಿ ಕೃಷ್ಣಾ ಕೊಳ್ಳ ಜಲ ಸಂರಕ್ಷಣಾ ಹೋರಾಟ ಸಮಿತಿ ವತಿಯಿಂದ ನಡೆದ ವಿಜಯಪುರ ಹಾಗೂ ಬಾಗಲಕೋಟೆ ಅವಳಿ ಜಿಲ್ಲೆಗಳ ಹೋರಾಟಗಾರರ ಸಭೆಯಲ್ಲಿ ಮಾತನಾಡಿದ ಅವರು, “ಒಂದರ ಮೇಲೊಂದರಂತೆ ಆಯೋಗಗಳನ್ನು ರಚಿಸಲಾಗುತ್ತಿದೆ. ಕಾನೂನಾತ್ಮಕ ಅಡೆತಡೆಗಳ ನೆಪದಲ್ಲಿ ಆಲಮಟ್ಟಿ 3ನೇ ಹಂತದ ಯೋಜನೆಯನ್ನು ವಿಳಂಬಗೊಳಿಸುವುದು ಸರಿಯಲ್ಲ. ಕೃಷ್ಣಾ ಕೊಳ್ಳದ ಜನಪ್ರತಿನಿಧಿಗಳು ಈ ವಿಚಾರದಲ್ಲಿ ಎಚ್ಚೆತ್ತುಕೊಂಡು ಕಾರ್ಯಪ್ರವೃತ್ತರಾಗಬೇಕು” ಎಂದು ಹೇಳಿದರು.

ರೈತಮುಖಂಡ ಅರವಿಂದ ಕುಲಕರ್ಣಿ, ಕೃಷ್ಣಾ ಕೊಳ್ಳದ ಏಳು ಜಿಲ್ಲೆಗಳಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.

ರೈತ ಮುಖಂಡ ಎಸ್.ವಿ. ಪಾಟೀಲ, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಸುಪ್ರೀಂ ಕೋರ್ಟ್‌ನಲ್ಲಿನ ವಿಚಾರಣೆಯಲ್ಲಿ ಅನಗತ್ಯ ಕಾಲಹರಣ ಮಾಡುತ್ತಿವೆ ಎಂದು ಆರೋಪಿಸಿ, ಕಾನೂನಾತ್ಮಕ ಹೋರಾಟದಲ್ಲಿಯೂ ಸಮಿತಿ ಭಾಗವಹಿಸಲಿದೆ ಎಂದರು.

ಕೇಂದ್ರ ಸರ್ಕಾರ, ಕೃಷ್ಣಾ ನ್ಯಾಯಾಧೀಕರಣದ ತೀರ್ಪಿನ ಅಧಿಸೂಚನೆ ಹೊರಡಿಸಬೇಕು, ಕೃಷ್ಣಾ ಕೊಳ್ಳದ ರೈತರ ನೀರಿನ ಹಕ್ಕನ್ನು ರಕ್ಷಿಸುವುದು, ಮುಂದಿನ ಹೋರಾಟದ ರೂಪುರೇಷೆ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚಿಸಲಾಯಿತು.

ಬಿ. ಭಗವಾನ್ ರೆಡ್ಡಿ, ಭೋಗೇಶ ಸೋಲಾಪುರ, ಲಲಿತಾ ಬಿಜ್ಜರಗಿ, ಶ್ರೀನಾಥ್ ಪೂಜಾರಿ, ನೀಲಂಬಿಕಾ ಬಿರಾದಾರ, ಭರತಕುಮಾರ ಎಚ್.ಟಿ., ಎಂ. ಪಡಶೆಟ್ಟಿ, ಸುರೇಶ ಬಿಜಾಪುರ ಸೇರಿದಂತೆ ಹಲವು ರೈತ ಮುಖಂಡರು ಉಪಸ್ಥಿತರಿದ್ದರು. ಜಿಲ್ಲಾ ಸತ್ರ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ಬಿ.ಸಿ. ಬಿರಾದಾರ ಸಭೆಯ ಅಧ್ಯಕ್ಷತೆ ವಹಿಸಿದ್ದರು.



**ಆಲಮಟ್ಟಿ 3ನೇ ಹಂತಕ್ಕೆ ವಿಳಂಬ ಬೇಡ । ಕಾನೂನಾತ್ಮಕ ಅಡೆತಡೆಗಳ ನೆಪ ಸಲ್ಲದು । ಜಲತಜ್ಞ ರಾಜೇಂದ್ರ ಪೊದ್ದಾರ ಹೇಳಿಕೆ**

# ಸಮಾಪನೆಗೊಂಡ 3 ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಆಕ್ಷೇಪಣೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಾಲೂಕಿನ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ಯಾವುದೇ ರೀತಿಯ ಚಟುವಟಿಕೆಗಳನ್ನು ನಡೆಸದೆ ಸ್ಥಗಿತಗೊಂಡಿರುವ ಮೂರು ಸಹಕಾರ ಸಂಘಗಳನ್ನು ಸಮಾಪನೆಗೊಳಿಸಿ ಅವುಗಳ ನೋಂದಣಿಯನ್ನು ರದ್ದುಪಡಿಸಲು ಸಹಕಾರ ಇಲಾಖೆ ತೀರ್ಮಾನಿಸಿದ್ದು, ಆಕ್ಷೇಪಣೆಗಳಿದ್ದಲ್ಲಿ 7 ದಿನಗಳೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು ತಿಳಿಸಿದ್ದಾರೆ.

ಈ ಸಂಘಗಳು ತಮ್ಮ ನೋಂದಾಯಿತ ಸ್ಥಳಗಳಲ್ಲಿ ಕಾರ್ಯಾಚರಿಸುತ್ತಿಲ್ಲ. ಅಲ್ಲದೆ, ಹಲವು ವರ್ಷಗಳಿಂದ ಲೆಕ್ಕ ಪರಿಶೋಧನೆಯೂನಡೆದಿರುವುದಿಲ್ಲಎಂದವರುತಿಳಿಸಿದ್ದಾರೆ.

ನೋಂದಣಿ ರದ್ದತಿಯಾಗಲಿರುವ ಸಂಘಗಳು: ಕುರಿ ಸಾಕಾಣಿಕೆ ಹಾಗೂ ಉಣ್ಣೆ ಉತ್ಪಾದಕರ ಸಹಕಾರ ಸಂಘ ನಿಯಮಿತ, ಬರಟಗಿ, ವಿಜಯಪುರ ನಗರ ಖಾದಿ ಮತ್ತು ಗ್ರಾಮೀಣೋದ್ಯೋಗ ಸಹಕಾರ ಸಂಘ ನಿಯಮಿತ, ಜೋರಾಪುರ ಪೇಠ ನೇಕಾರ ಸಹಕಾರ ಸಂಘ ನಿಯಮಿತ, ವಿಜಯಪುರ. ಆಕ್ಷೇಪಣೆಗೆ 7 ದಿನಗಳ ಗಡುವು: ಈ ಮೇಲ್ಕಂಡ ಸಹಕಾರ ಸಂಘಗಳಿಗೆ ಸಂಬಂಧಿಸಿದವರಿಂದ ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ, ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಿ ಈ ಮೂರೂ ಸಂಘಗಳ ನೋಂದಣಿಯನ್ನು ರದ್ದುಗೊಳಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ತದನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಬ್ಬೇವಾಡದ ಬಾಲಕ ಕಾಣೆ: ಪ್ರಕರಣ ದಾಖಲು

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಗುಬ್ಬೇವಾಡ ಗ್ರಾಮದ 14ವರ್ಷ 5ತಿಂಗಳ ಬಾಲಕ ಸಂಗಮೇಶ ಪಡಶೆಟ್ಟಿ ಕಾಣೆಯಾಗಿರುವ ಕುರಿತು ಕಲಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗುಬ್ಬೇವಾಡ ಗ್ರಾಮದ ಅಶೋಕ ಪಡಶೆಟ್ಟಿ ಅವರ ಪುತ್ರ ಸಂಗಮೇಶ ಪಡಶೇಟ್ಟಿ ಸೆ.7ರಂದು ಮಧ್ಯಾಹ್ನ ಸುಮಾರು 12 ಗಂಟೆಗೆ ತಂದೆ–ತಾಯಿಗೆ ಬಸ್ ನಿಲ್ದಾಣದ ಕಡೆಗೆ ಹೋಗಿ ಬರುತ್ತೇನೆ ಎಂದು ಹೇಳಿ ಮನೆಯಿಂದ ತೆರಳಿದ್ದಾನೆ. ಆದರೆ, ಬಳಿಕ ಮನೆಗೆ ಮರಳದೆ ಕಾಣೆಯಾಗಿದ್ದಾನೆ. ಮಗ ಮನೆಗೆ ಬಾರದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಎಲ್ಲೆಡೆ ಹುಡುಕಾಟ ನಡೆಸಿದರೂ ಪತ್ತೆಯಾಗದ ಹಿನ್ನೆಲೆಯಲ್ಲಿ ತಂದೆ ಅಶೋಕ ಪಡಶೆಟ್ಟಿ ಅವರು ಕಲಕೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಬಾಲಕನ ಬಗ್ಗೆ ಯಾವುದೇ ಮಾಹಿತಿ ದೊರೆತಲ್ಲಿ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ.

# ಅ.27ರಂದು ಅಂತಿಮ ಮತದಾರರ ಪಟ್ಟಿ ಪ್ರಕಟ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಜೂ.30ರಿಂದ ಆರಂಭವಾದ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಆ.17ರವರೆಗೆ ಬೂತ್ ಮಟ್ಟದ ಅಧಿಕಾರಿಗಳು 2,51,761 ಮತದಾರರ ಮನೆಗಳಿಗೆ ಭೇಟಿ ನೀಡಿ, ಪರಿಷ್ಕರಣೆ ಅರ್ಜಿಗಳ ಎರಡು ಪ್ರತಿಗಳನ್ನು ವಿತರಣೆ ಮಾಡಿದ್ದಾರೆ. ಇಲ್ಲಿಯವರೆಗೆ 1,12,682 ಪುರುಷರು ಹಾಗೂ 1,05,964 ಮಹಿಳೆಯರು ಸೇರಿದಂತೆ ಒಟ್ಟು 2,18,671 ಮತದಾರರ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿ ವಿನಯಕುಮಾರ್ ಪಾಟೀಲ ಹೇಳಿದರು.

ಸಿಂದಗಿ ನಗರದ ತಾಲೂಕು ಆಡಳಿತ ಸಭಾಂಗಣದಲ್ಲಿ ಹಮ್ಮಿಕೊಂಡ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಸೆ.26ರವರೆಗೆ ಅವಕಾಶವಿದ್ದು, ಇದುವರೆಗೆ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗಿಲ್ಲ. 2002 ಹಾಗೂ 2025ರ ಮತದಾರರ ಪಟ್ಟಿಯಲ್ಲಿನ ರಕ್ತಸಂಬಂಧ ಆಧಾರಿತ ಮ್ಯಾಪಿಂಗ್ ಹಾಗೂ ಪರಿಷ್ಕರಣೆ ಅರ್ಜಿ ಸಲ್ಲಿಸದಿರುವುದು ಸೇರಿದಂತೆ ವಿವಿಧ ಕಾರಣಗಳಿಗೆ ಸಿಂದಗಿ ತಾಲೂಕಿನ 489, ಆಲಮೇಲ ತಾಲೂಕಿನ 1,266 ಹಾಗೂ ಇಂಡಿ ತಾಲೂಕಿನ 3ಮತದಾರರು ಸೇರಿ ಒಟ್ಟು 1,758 ಮಂದಿಗೆ ಸೆ.1ರಿಂದ ನೋಟಿಸ್ ಜಾರಿ ಮಾಡಲಾಗಿದೆ. ಈ ಪೈಕಿ ಸೆ.8ರಿಂದ 562 ಜನರ ವಿಚಾರಣೆ ನಡೆಸಲಾಗಿದೆ. ಉಳಿದ 1,196 ಮಂದಿಯಲ್ಲಿ 899 ಮಂದಿಗೆ ವಿಚಾರಣೆಯ ದಿನಾಂಕ ನಿಗದಿಪಡಿಸಲಾಗಿತ್ತು. ಕಾರಣಾಂತರಗಳಿಂದ ಕೆಲವರು ವಿಚಾರಣೆಗೆ ಹಾಜರಾಗದ ಹಿನ್ನೆಲೆಯಲ್ಲಿ ಅವರಿಗೆ ಮತ್ತೊಮ್ಮೆ ದಿನಾಂಕ ನಿಗದಿಪಡಿಸಲಾಗುವುದು. ಇನ್ನೂ 293 ಮತದಾರರ ವಿಚಾರಣೆ ಅಂತಿಮ ಹಂತದಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಳಿಸಲು ಅ.24ರವರೆಗೆ ಕಾಲಾವಕಾಶ ನೀಡಲಾಗಿದೆ. ಬಳಿಕ ಸಿಂದಗಿ ವಿಧಾನಸಭಾ ಮತಕ್ಷೇತ್ರ–33ರಲ್ಲಿ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ–2026ರ ಅಂತಿಮ ಪ್ರಕ್ರಿಯೆ ಪೂರ್ಣಗೊಳಿಸಿ ಅ.27ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ತಹಶೀಲ್ದಾರ್ ಕರೆಪ್ಪ ಬೆಳ್ಳಿ, ಶಿರಸ್ತೇದಾರ್ ಎಂ.ಎಂ.ಚಟ್ಟರಕಿ ಇದ್ದರು.

**"ವಿಚಾರಣೆಗೆ ಹಾಜರಾಗದವರಿಗೆ ಮತ್ತೊಂದು ಅವಕಾಶ: ಉಳಿದ 899 ಜನರ ವಿಚಾರಣೆಯ ದಿನಾಂಕ ನಿಗದಿಯಾಗಿದ್ದರೂ, ಕಾರಣಾಂತರಗಳಿಂದ ಕೆಲವರು ಹಾಜರಾಗಿಲ್ಲ. ಹೀಗಾಗಿ ಹಾಜರಾಗದವರಿಗೆ ಮತ್ತೊಮ್ಮೆ ವಿಚಾರಣೆಯ ದಿನಾಂಕ ನಿಗದಿಪಡಿಸಲಾಗಿದೆ. ಬೂತ್ ಮಟ್ಟದ ಅಧಿಕಾರಿಯ ಜೊತೆಗೆ ತಹಶೀಲ್ದಾರ್ ಕಾರ್ಯಾಲಯಕ್ಕೆ ಬಂದು ಪ್ರಕ್ರಿಯೆ ಪೂರ್ಣಗೊಳಿಸಿಕೊಳ್ಳಬೇಕು."**

**■ ವಿನಯಕುಮಾರ ಪಾಟೀಲ**
**ನೋಂದಣಾಧಿಕಾರಿ**



# ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ

■ ಉದಯರಶ್ಮಿ ದಿನಪತ್ರಿಕೆ

ಯಡ್ರಾಮಿ: ಕರ್ನಾಟಕ ಪುಸ್ತಕ ಪ್ರಾಧಿಕಾರ, ಬೆಂಗಳೂರು ಹಾಗೂ ಜಿಲ್ಲಾ ಜಾಗೃತ ಸಮಿತಿ, ಕಲಬುರಗಿ ಇವರ ಸಂಯುಕ್ತ ಆಶ್ರಯದಲ್ಲಿ 'ಮನೆಗೊಂದು ಗ್ರಂಥಾಲಯ' ಅಭಿಯಾನದ ಸಮಾರಂಭವು ಪಟ್ಟಣದಲ್ಲಿ ನಡೆಯಿತು.

ಕಾರ್ಯಕ್ರಮಕ್ಕೆ ಪಟ್ಟಣದ ವಿರಕ್ತಮಠದ ಸಿದ್ದಲಿಂಗ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಚಾಲನೆ ನೀಡಿದರು

ಈ ವೇಳೆ ಆಶಯ ನುಡಿಗಳನಾಡಿದ ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯ ಬಿ.ಎಚ್.ನಿರಗುಡಿ, ಪುಸ್ತಕ ಪ್ರಾಧಿಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿರುವ ಮನೆಗೊಂದು ಗ್ರಂಥಾಲಯ ಅನುಷ್ಠಾನ ಕಾರ್ಯಕ್ರಮವು, ಮೊಬೈಲ್ ಮಾಯೆಯ ಮೋಹದಿ ಬಳಲುತ್ತಿರುವ ಜನತೆಯನ್ನು,ಪುಸ್ತಕಓದಿನಕಡೆಗೆಗಮನಸೆಳೆಯಲು ಆಯೋಜಿಸಲಾಗಿದ್ದು, ಪುಸ್ತಕ ಓದಿದರೆ ಮಸ್ತಕದ ಜೊತೆಗೆ ತನು–ಮನವು ಕ್ರಿಯಾಶೀಲವಾಗುತ್ತೆ, ಆದ್ರೆ ಅತಿಯಾದ ಮೊಬೈಲ್ ಬಳಕೆಯಿಂದ ದೇಹವು ಅನಾರೋಗ್ಯದ ಕಡೆಗೆ ಸಾಗುತ್ತಿದೆ ಆದರಿಂದ ಪ್ರತಿಯೊಂದು ಮನೆಯಲ್ಲೂ ಪುಸ್ತಕ ಓದುವ ಸಂಸ್ಕೃತಿ ಬೆಳೆಸುವ ಮೂಲಕ ಜ್ಞಾನವೃದ್ಧಿ ಹಾಗೂ ಮಕ್ಕಳಲ್ಲಿ ಓದುವ ಹವ್ಯಾಸವನ್ನು ಬೆಳೆಸುವ ಅಗತ್ಯವನ್ನು ಒತ್ತಿಹೇಳಿದರು. ಮುಖ್ಯ ಅತಿಥಿಗಳಾಗಿ ಚಂದ್ರಶೇಖರ ಪುರಾಣಿಕ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕಿ ಡಾ.ಶೋಭಾದೇವಿ ಚಕ್ಕಿ, ರೇವಣಸಿದ್ದಪ್ಪ ದುಖಾನ, ರೇವಣಸಿದ್ದಯ್ಯ ಮಠಪತಿ, ಆರ್, ಜಿ, ಪುರಾಣಿಕ್, ಗೊಲ್ಲಾಳಪ್ಪಗೌಡ ಚನ್ನಪ್ಪಗೌಡ್ರು, ಹಬೀಬ್ ಸಾಬ್ ಮುಲ್ಲಾ ಕೊಂಡಗೂಳಿ, ಸಂತೋಷ ಕುಲಕರ್ಣಿ ಇತರರಿದ್ದರು.

**ಅಭಿನಂದನಾ ಸತ್ಕಾರ**

**ಮನೆಯಲ್ಲಿ ಗ್ರಂಥಾಲಯದ ಏರ್ಪಾಡು ಮಾಡಿದ ಯಡ್ರಾಮಿ ಪಟ್ಟಣದ ಯುವ ಸಾಹಿತಿ, ಪತ್ರಕರ್ತ, ಡಾ.ಮಲ್ಲಿಕಾರ್ಜುನ ಆಲಮೇಲ್, ಸಾಹಿತಿ ಅಮೃತ ದೊಡ್ಡಮನಿ, ಪುಸ್ತಕ ಪ್ರೇಮಿಗಳಾದ ಚಂದ್ರಶೇಖರ ಪುರಾಣಿಕ, ದೇವಿಂದ್ರಪ್ಪಗೌಡ ಸರಕಾರ, ಮಲ್ಲಾರಾವ ಬಿ. ಕುಲಕರ್ಣಿ, ಶಿಕ್ಷಕರಾದ ಅಲ್ಲಾಪಟೇಲ್ ಚಿಂಚೋಳಿ ಮತ್ತು ಬಸ್ಸೇಟೆಪ್ಪ ವಾರದ ಅವರ ಮನೆಗಳಿಗೆ ತೆರಳಿ ಅಭಿನಂದನಾ ಪತ್ರ ನೀಡಿ ಗೌರವಪೂರ್ವಕವಾಗಿ ಸತ್ಕರಿಸಲಾಯಿತು.**

# ಪೌರ ಕಾರ್ಮಿಕರ ಪಾತ್ರ ಮಹತ್ವದ್ದು :ಕೋಳಶೆಟ್ಟಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ನಗರ ಹಾಗೂ ಪಟ್ಟಣಗಳಲ್ಲಿ ಸ್ವಚ್ಛತೆ ಕಾಪಾಡುವಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದು ಎಂದು ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ ಹೇಳಿದರು.

ನಗರದ ಡಾ. ಬಾಬು ಜಗಜೀವನರಾಮ ಭವನದಲ್ಲಿ ನಡೆದ ಪೌರ ಕಾರ್ಮಿಕರ ದಿನಾಚರಣೆಯಲ್ಲಿ ಮಾತನಾಡಿದರು.

ಪೌರ ಕಾರ್ಮಿಕರು ಕಸ ಗುಡಿಸುವದು, ಚರಂಡಿ ಸ್ವಚ್ಛತೆ ಮತ್ತು ಕಸ ಸಂಗ್ರಹಿಸುವ ಕೆಲಸ ಮಾಡುತ್ತಾರೆ. ತಮ್ಮ ಆರೋಗ್ಯದ ಕಡೆಗೆ ಗಮನ ನೀಡದೇ ನಗರ ಜನರ ಆರೋಗ್ಯ ಕಾಪಾಡುವಲ್ಲಿ ಶ್ರಮಿಸುತ್ತಾರೆ ಎಂದರು.

ನಗರದ ಓಂಕಾರ ಆಶ್ರಮದ ಸ್ವರೂಪಾನಂದ ಶ್ರೀಗಳು ಮಾತನಾಡಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುವ ಪೌರ ಕಾರ್ಮಿಕರಿಗೆ ಅತ್ಯಂತ ಕಡಿಮೆ ಸಂಬಳ ಇದೆ. ಅನೇಕ ವರ್ಷಗಳಿಂದ ಕೆಲಸ ಮಾಡುತ್ತಿದ್ದರೂ ಯಾವದೇ ಸರಕಾರ ಅವರ ಕೆಲಸ ಖಾಯಮಾತಿ ನೀಡಿಲ್ಲ ಎಂದರು.

ಪೌರಾಯುಕ್ತ ಶಿವಾನಂದ ಪೂಜಾರಿ, ದೀಪಾಲಯ ಸಮಾಜ ಸೇವಾ ಕೇಂದ್ರದ ಪವಿತ್ರಾ ಅವರು ಪೌರ ಕಾರ್ಮಿಕರ ಕುರಿತು ಮಾತನಾಡಿದರು.

ಮಾಜಿ ಸದಸ್ಯರಾದ ಶಬ್ಬೀರ ಖಾಜಿ, ರೇಣುಕಾ ಉಟಗಿ, ಭೀಮಾಶಂಕರ ಮೂರಮನ, ಶ್ರೀಶೈಲ ಪೂಜಾರಿ ವೇದಿಕೆಯ ಮೇಲಿದ್ದರು.

ಸಿಬ್ಬಂದಿ ವರ್ಗದ ಪ್ರವೀಣ ಸೋನಾರ, ಅಸ್ಲಮ್ ಖಾದಿಮ್ ಸಂಗೀತಾ ಕೋಳಿ, ಅನುಸೂಯಾ ಕಂಠಿಕರ ರೇಖಾ ದರೆನ್ನವರ, ಅಜರ ಶೇಖ, ಕೃಷ್ಣಾ ರಾಠೋಡ, ವಿರೇಶ ಹಿರೇಮಠ, ಮುತ್ತು ಮುರಾಳ, ಮತ್ತಿತರಿದ್ದರು.

ಕರ್ನಾಟಕ ಪೌರ ಸೇವಾ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಹುಚ್ಚಪ್ಪ ಶಿವಶರಣ, ತಾಲೂಕಾ ಅಧ್ಯಕ್ಷೆ ಲಕ್ಷ್ಮಿ ಕಾಲೇಭಾಗ, ಮರೆಪ್ಪ ಗುಡುಮಿ, ಶಿರಸು ಹಾದಿಮನಿ ಮಾಳಪ್ಪ ಹೆಳವರ ಮತ್ತಿತರಿದ್ದರು.

ಇದೇ ವೇಳೆ ಎಲ್ಲ ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು.

# ಆಯುರ್ವೇದವು ಗ್ರಾಮಗಳಿಗೂ ತಲುಪಲಿ :ಡಾ.ಸಂಬಣ್ಣಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಆಯುರ್ವೇದ ವೈದ್ಯ ಪದ್ಧತಿ ನಗರ ಪ್ರದೇಶಗಳಿಗೆ ಸೀಮಿತವಾಗದೇ ಹಳ್ಳಿ ಹಳ್ಳಿಗಳಿಗೂ ತಲುಪಿ ವ್ಯಾಪಕವಾಗಿ ಪ್ರಚಾರಗೊಳ್ಳಬೇಕು. ಪ್ರತಿಯೊಬ್ಬರೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡು ಆಯುರ್ವೇದ ಪದ್ಧತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ ಕರೆ ನೀಡಿದರು.

ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ಸರ್ಕಾರಿ ಎಎನ್ಎಂ–ಜಿಎನ್ಎಂ ತರಬೇತಿ ಸಂಸ್ಥೆಯಲ್ಲಿ ಸೆ.23ರಂದು ಆರೋಗ್ಯಕರ ನಾಳೆಗಳಿಗಾಗಿ ಆಯುರ್ವೇದ ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಿದ್ದ 11ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಧನರ್ಗಿ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ. ಭುವನೇಶ್ವರಿ ಬೇಳಕುಡಕರ ಮಾತನಾಡಿ, ಬದಲಾಗುತ್ತಿರುವ ಜೀವನಶೈಲಿಯಿಂದ ಮಕ್ಕಳಲ್ಲಿ ಬೊಜ್ಜು, ಯುವಕರಲ್ಲಿ ಹೃದಯ ಸಂಬಂಧಿ ಕಾಯಿಲೆಗಳು ಹಾಗೂ ಮಧ್ಯವಯಸ್ಕರಲ್ಲಿ ರಕ್ತದೊತ್ತಡ, ಮಧುಮೇಹ ಮತ್ತು ಕೀಲುನೋವು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಇವುಗಳ ನಿಯಂತ್ರಣಕ್ಕೆ ಸೂಕ್ತ ಜೀವನಶೈಲಿ,ಯೋಗಾಸನ, ಪ್ರಾಣಾಯಾಮ,ಧ್ಯಾನ ಪಾಲಿಸುವುದು ಅಗತ್ಯ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಂ.ಬಿ.ಬಿರಾದಾರ ಮಾತನಾಡಿ, ಆಯುರ್ವೇದ ವಿದ್ಯಾರ್ಥಿಗಳು ತಮ್ಮ ವೃತ್ತಿ ಜೀವನದಲ್ಲಿ ಈ ಪದ್ಧತಿಯ ತತ್ವಗಳನ್ನು ಅಳವಡಿಸಿಕೊಂಡು ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸಬೇಕು. ದೀರ್ಘಕಾಲಿಕ ಆರೋಗ್ಯ ಸಮಸ್ಯೆಗಳ ನಿರ್ವಹಣೆಯಲ್ಲಿ ಆಯುರ್ವೇದದ ಮಹತ್ವವನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ವಿದ್ಯಾವತಿ ಎಂ.ಅಥಣಿ ಅವರು ಮಾತನಾಡಿ, ಆಯುರ್ವೇದದ ಮಹತ್ವವನ್ನು ಸಾರ್ವಜನಿಕರಿಗೆ ತಲುಪಿಸುವುದು ದಿನಾಚರಣೆಯ ಉದ್ದೇಶವಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿ ಡಾ. ಬಿ.ಜಿ. ಪಾಟೀಲ ಅವರು ಆಯುರ್ವೇದ ಔಷಧಿಗಳ ಬಳಕೆ ಹಾಗೂ ಮನೆಮದ್ದುಗಳ ಕುರಿತು ಪ್ರಾತ್ಯಕ್ಷಿಕೆ ನೀಡಿದರು.ಬಿ.ಎಲ್.ಡಿ.ಇ. ಆಯುರ್ವೇದ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಕೆ.ಎ. ಪಾಟೀಲ ಅವರು ಆರೋಗ್ಯಕರ ಆಹಾರ ಪದ್ಧತಿ ಹಾಗೂ ಜೀವನಶೈಲಿ ಕುರಿತು ಉಪನ್ಯಾಸ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವಸಂತ ಎಸ್. ಹೊನಮೊಡೆ, ಜಿಎನ್ಎಂ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಮಹಾಂತೇಶ ಸುರಪುರಮಠ, ಲೋಹಗಾಂವ ಮಾಜಿ ಗ್ರಾ.ಪಂ. ಅಧ್ಯಕ್ಷ ರಾಜುಗೌಡ ಬಿರಾದಾರ ಹಾಗೂ ಉಪಸ್ಥಿತರಿದ್ದರು.

ಡಾ. ಎಂ.ಎ. ಹಿರೇಮಠ ಸ್ವಾಗತಿಸಿದರು. ಡಾ. ವಿ.ಬಿ. ದೇಸಾಯಿ ನಿರೂಪಿಸಿದರು. ಡಾ. ಬಿ.ಎನ್. ವಗದುರ್ಗಿ ವಂದಿಸಿದರು.

# ದಾವಣಗೆರೆ ವಿವಿ ವಿಶ್ರಾಂತ ಕುಲಪತಿ ಪ್ರೊ. ಎಸ್. ಇಂದುಮತಿ ಕರೆ

# ವಿದ್ಯಾರ್ಥಿನಿಯರು ಸ್ವಾವಲಂಬಿಗಳಾಗಿ ಉತ್ತಮ ಬದುಕು ಕಟ್ಟಿಕೊಳ್ಳಲಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಹೆಣ್ಣುಮಕ್ಕಳು ತಮ್ಮ ಭದ್ರತೆಯ ಕುರಿತು ಯಾವುದೇ ಆತಂಕಕ್ಕೆ ಒಳಗಾಗದೆ ಆತ್ಮವಿಶ್ವಾಸ ಬೆಳೆಸಿಕೊಳ್ಳಬೇಕು. ಶಿಕ್ಷಣದ ಜತೆಗೆ ವಿವಿಧ ಕೌಶಲ್ಯಗಳನ್ನು ರೂಢಿಸಿಕೊಂಡು ಸ್ವಾವಲಂಬಿಗಳಾಗಿ ಬದುಕು ಕಟ್ಟಿಕೊಳ್ಳಬೇಕು ಎಂದು ದಾವಣಗೆರೆ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಎಸ್. ಇಂದುಮತಿ ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಹಾಗೂ ವಿದ್ಯಾರ್ಥಿನಿ ಕ್ಷೇಮಪಾಲನಾ ನಿರ್ದೇಶನಾಲಯದ ಸಹಯೋಗದಲ್ಲಿ ಪ್ರಥಮ ವರ್ಷದ ಯುಜಿ ಹಾಗೂ ಪಿಜಿ ವಿದ್ಯಾರ್ಥಿನಿಯರಿಗಾಗಿ ಸೆ, 23ರಂದು ಹಮ್ಮಿಕೊಂಡಿದ್ದ 'ಪುತ್ರಿಯರ ದಿನಸ್ಪಂದನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯರು ಸಮಾನತೆ ಸಾಧಿಸಲು ಶಿಕ್ಷಣದ ಜತೆಗೆ ವಿವಿಧ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ಆರ್ಥಿಕವಾಗಿ ಸಬಲರಾಗುವ ಮೂಲಕ ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬೇಕು. ಪ್ರತಿಯೊಬ್ಬರಲ್ಲಿರುವ ಪ್ರತಿಭೆಯೇ ಅವರನ್ನು ಮುನ್ನಡೆಸುವ ಪ್ರಮುಖ ಶಕ್ತಿಯಾಗಿದೆ. ತಮ್ಮತನವನ್ನು ಉಳಿಸಿಕೊಂಡು ದೇಶದ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಬೇಕು ಎಂದರು.

ಪರಿಸರ ಹಾಗೂ ಪ್ರಕೃತಿಯ ಸಂರಕ್ಷಣೆಯ ಜವಾಬ್ದಾರಿಯನ್ನೂ ಅರಿತುಕೊಂಡು ಉತ್ತಮ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಮಾತನಾಡಿ, ಇಂದು ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿಯೂ ತಮ್ಮದೇ ಆದ ಸ್ಥಾನಮಾನವನ್ನು ಗಳಿಸಿಕೊಂಡಿದ್ದಾರೆ. ಕುಟುಂಬದ ಪ್ರೋತ್ಸಾಹ ಹಾಗೂ ಶಿಕ್ಷಕರ ಆಶೀರ್ವಾದದಿಂದ ವಿಶ್ವವಿದ್ಯಾಲಯದ ಹೆಬ್ಬಾಗಿಲಿಗೆ ತಲುಪಿರುವ ವಿದ್ಯಾರ್ಥಿನಿಯರಿಗೆ ತಮ್ಮ ಪ್ರತಿಭೆಯನ್ನು ಅರಳಿಸಿಕೊಳ್ಳಲು ವಿಶ್ವವಿದ್ಯಾಲಯವು ಹಲವು ಅವಕಾಶಗಳನ್ನು ಒದಗಿಸುತ್ತಿದೆ. ವಿದ್ಯಾರ್ಥಿನಿಯರು ಉತ್ತಮ ಶಿಕ್ಷಣ ಪಡೆದು ತಮ್ಮದೇ ಆದ ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ವಿಶ್ವವಿದ್ಯಾನಿಲಯದ ಕುಲಸಚಿವ ಡಾ. ವಿಜಯಕುಮಾರ ಅಜೂರ್ ಮಾತನಾಡಿ, ಜೀವನದ ಪ್ರತಿಯೊಂದು ಹೆಜ್ಜೆಯಲ್ಲೂ ಉತ್ತಮ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ಶೈಕ್ಷಣಿಕ ಹಾಗೂ ಇತರ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ವಿಶ್ವವಿದ್ಯಾನಿಲಯದ ಮೌಲ್ಯಮಾಪನ ಕುಲಸಚಿವ ಪ್ರೊ. ಬಿ. ಎಲ್ ಲಕ್ಕಣ್ಣವರ, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಪ್ರಥಮ ವರ್ಷದ ಯುಜಿ ಹಾಗೂ ಪಿಜಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಕ್ಷೇಮಪಾಲನಾ ನಿರ್ದೇಶನಾಲಯದ ನಿರ್ದೇಶಕಿ ಪ್ರೊ. ಜ್ಯೋತಿ ಉಪಾಧ್ಯೆ ಪ್ರಾಸ್ತಾವಿಕವಾಗಿ ಮಾತನಾಡಿ ಅತಿಥಿಗಳನ್ನು ಸ್ವಾಗತಿಸಿದರು. ವಿಶ್ವವಿದ್ಯಾನಿಲಯದ ಸಂಗೀತ ವಿಭಾಗದ ವಿದ್ಯಾರ್ಥಿನಿಯರು ಮಹಿಳಾ ಗೀತೆ ಹಾಡಿದರು. ಸ್ನಾತಕ ಕೋರ್ಸುಗಳ ವಿಶೇಷ ಅಧಿಕಾರಿ ಪ್ರೊ. ಡಿ. ಎಂ. ಮದರಿ ವಂದಿಸಿದರು. ದಾನೇಶ್ವರಿ ನಿರೂಪಿಸಿದರು.

# ತಾಳಿಕೋಟೆ ತಾಲೂಕು ತೀವ್ರ ಬರಪೀಡಿತ ಪ್ರದೇಶವೆಂದು ಘೋಷಣೆ । ಆದೇಶ ಪ್ರತಿ ಹಸ್ತಾಂತರಿಸಿದ ಕೃಷಿ ಅಧಿಕಾರಿ ಪಾಟೀಲ

# ತಾಳಿಕೋಟೆಯಲ್ಲಿ 21 ದಿನಗಳ ರೈತರ ಧರಣಿ ಹಿಂಪಡೆತ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ತಾಲೂಕನ್ನು ತೀವ್ರ ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಆಗ್ರಹಿಸಿ ಪಟ್ಟಣದ ಪ್ರವಾಸಿ ಮಂದಿರದ ಪಕ್ಕದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ನೇತೃತ್ವದಲ್ಲಿ ಕಳೆದ 21 ದಿನಗಳಿಂದ ನಡೆಯುತ್ತಿದ್ದ ಅನಿರ್ದಿಷ್ಟ ಅಹೋರಾತ್ರಿ ಧರಣಿ ಸತ್ಯಾಗ್ರಹವನ್ನು ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ರೈತರು ಬುಧವಾರ ಹಿಂಪಡೆದರು.

ಧರಣಿ ಸ್ಥಳಕ್ಕೆ ಆಗಮಿಸಿದ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಹಾಗೂ ತಹಶೀಲ್ದಾರ್ ಎಂ.ಎಚ್. ಅರಕೇರಿ ಅವರು, ತಾಳಿಕೋಟಿ ತಾಲೂಕನ್ನು ತೀವ್ರಬರಪೀಡಿತಪ್ರದೇಶವೆಂದುಘೋಷಿಸಿರುವ ಸರ್ಕಾರದ ಆದೇಶದ ಪ್ರತಿಯನ್ನು ಧರಣಿ ನಿರತ ರೈತ ಮುಖಂಡರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅಧಿಕಾರಿಗಳು, ರೈತರ ಹೋರಾಟಕ್ಕೆ ಸರ್ಕಾರ ಸ್ಪಂದಿಸಿದ್ದು, ತಾಳಿಕೋಟಿ ತಾಲೂಕನ್ನು ತೀವ್ರ ಬರಪೀಡಿತ ಪ್ರದೇಶವೆಂದು ಪರಿಗಣಿಸಿ ಆದೇಶ ಹೊರಡಿಸಿದೆ. ಕಳೆದ 21 ದಿನಗಳಿಂದ ರೈತರು ಹಗಲು–ರಾತ್ರಿ ನಡೆಸಿದ ಹೋರಾಟಕ್ಕೆ ಜಯ ಸಿಕ್ಕಿದೆ. ಆದೇಶದ ಪ್ರತಿಯನ್ನು ಸ್ವೀಕರಿಸಿ ಧರಣಿ ಹಿಂಪಡೆಯುವಂತೆ ಮನವಿ ಮಾಡಿದರು.

ಅಧಿಕಾರಿಗಳ ಮನವಿಯ ಮೇರೆಗೆ ರೈತ ಮುಖಂಡರು ಧರಣಿಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಪಿಎಸ್ಐ ಜ್ಯೋತಿ ಖೋತ್, ತಾಳಿಕೋಟೆ ಕೃಷಿ ಅಧಿಕಾರಿ ಮಹೇಶ ಜೋಶಿ, ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ವಿಠ್ಠಲ ಬಿರಾದಾರ, ಆಮ್ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷ ಭೋಗೇಶ ಸೋಲಾಪುರ, ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ತಾಲೂಕು ಅಧ್ಯಕ್ಷ ಬಾಲಪ್ಪಗೌಡ ಲಿಂಗದಳ್ಳಿ, ಉಪಾಧ್ಯಕ್ಷ ರಾಮನಗೌಡ ಹಾದಿಮನಿ, ಬಸವರಾಜ ಹೊಸಳ್ಳಿ, ಹನಮಂತರಾಯ ಹಂದ್ರಾಳ, ಮಡಿವಾಳಪ್ಪ ಕಲಬುರಗಿ, ಸಂಗನಗೌಡ ಟಕ್ಕಳಕಿ, ಪಾರತಗೋಳ, ಶಾಂತಗೌಡ ಬಿರಾದಾರ, ನ್ಯಾಯವಾದಿಗಳಾದ ಪ್ರಭಾಕರ ಗುಡಗಂಟಿ, ಸಂಗನಗೌಡ ಕೋಲೂರ, ಮಾಂತಗೌಡ ಮುದ್ದೂರ, ಅರುಣ ಹೊಸಮನಿ, ಚನ್ನನಗೌಡ ಬಿರಾದಾರ, ಆನಂದ ಲಿಂಗದಳ್ಳಿ ಸೇರಿದಂತೆ ರೈತ ಮುಖಂಡರು ಉಪಸ್ಥಿತರಿದ್ದರು.

## ರೈತರ ಸಮಸ್ಯೆಗಳಿಗೆ ಹೋರಾಟವೇ ಅನಿವಾರ್ಯವಾಗಬಾರದು

**ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ತಾಳಿಕೋಟೆ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ರೈತರು 21 ದಿನಗಳ ಕಾಲ ಅಹೋರಾತ್ರಿ ಧರಣಿ ನಡೆಸುವ ಪರಿಸ್ಥಿತಿಯನ್ನು ಸರ್ಕಾರ ನಿರ್ಮಿಸಿರುವುದು ವಿಷಾದನೀಯ. ರೈತರನ್ನು ಈ ರೀತಿ ಸತಾಯಿಸುವ ಕೆಲಸ ಮಾಡಬಾರದು. ಇಂದಿನ ದಿನಮಾನಗಳಲ್ಲಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹೋರಾಟವೇ ಅನಿವಾರ್ಯವಾಗಿರುವುದು ರೈತರ ದುರ್ದೈವ ಎಂದರು.**

# ಸೆ.25 ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೆಪಿಟಿಸಿಎಲ್ ವತಿಯಿಂದ ಎರಡನೇ ತ್ರೈಮಾಸಿಕ ದುರಸ್ತಿ ಹಾಗೂ ನಿರ್ವಹಣಾ ಕಾರ್ಯ ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ 220 ಕೆವಿ ವಿಜಯಪುರ 110/33/11 ಕೆವಿ ಜುಮನಾಳ, ವಿಜಯಪುರ ಸಿಟಿ, ಕೆಐಎಡಿಬಿ ವಿಜಯಪುರ, ಭೂತನಾಳ, 33 ಕೆವಿ ತಿಡಗುಂದಿ, ಅರಕೇರಿ ಎಲ್ ಐಎಸ್, 33 ಕೆವಿ ಹೊನ್ನುಟಗಿ, 33 ಕೆವಿ ನಾಗಠಾಣ, ಮಮದಾಪೂರ, ಬೆಳ್ಳುಬ್ಬಿ, ದೇವರಗೆಣ್ಣೂರ, ಶಿರಬೂರ, ಬಬಲೇಶ್ವರ, ಕಂಬಾಗಿ, ಕಾಖಂಡಕಿ, ನಿಡೋಣಿ, ತಿಕೋಟ, ತೊರವಿ, ಹೊನವಾಡ, ಕನಮಡಿ ಹಾಗೂ ಟಕ್ಕಳಕಿ 110/33/11 ಕೆವಿ ವಿದ್ಯುತ್ ಉಪ ಕೇಂದ್ರಗಳ ಮಾರ್ಗಗಳಲ್ಲಿ ಸೆ.25 ರಂದು ಬೆಳಿಗ್ಗೆ 9:00 ರಿಂದ ಸಂಜೆ 4:00 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಆದ್ದರಿಂದ ಸಾರ್ವಜನಿಕರು ಹಾಗೂ ಗ್ರಾಹಕರು ಹೆಸ್ಕಾಂ ಜೊತೆ ಸಹಕರಿಸಬೇಕೆಂದು ಹೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ಪ್ರ) ಪ್ರಕಟಣೆಯಲ್ಲಿ ವಿನಂತಿ ಮಾಡಿಕೊಂಡಿದ್ದಾರೆ.

# ತಾಲೂಕಾಧ್ಯಕ್ಷರಾಗಿ ಸುಂಗಠಾಣ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸಿಂದಗಿ ಕೆಆರ್‌ಎಸ್ ಪಕ್ಷದ ತಾಲೂಕಾಧ್ಯಕ್ಷರನ್ನಾಗಿ ಶಂಕರ ಸುಂಗಠಾಣ ಅವರನ್ನು ಪಕ್ಷದ ವಿಜಯಪುರ ಜಿಲ್ಲಾ ಉಸ್ತುವಾರಿ ವಿಜಯಕುಮಾರ ಯು.ಬಿ. ಹಾಗೂ ಜಿಲ್ಲಾಧ್ಯಕ್ಷ ಅಶೋಕ ಜಾದವ್ ಅವರ ಆದೇಶದ ಮೇರೆಗೆ ಆಯ್ಕೆ ಮಾಡಲಾಗಿದೆ. ನಿರಂತರ ಹೋರಾಟ ಹಾಗೂ ಜನಪರ ಕಾರ್ಯಗಳನ್ನು ಗುರುತಿಸಿ ಪಕ್ಷ ಈ ಜವಾಬ್ದಾರಿ ನೀಡಿದೆ.

# ಬೇನಾಳ ಗ್ರಾಮಕ್ಕೆ ನುಗ್ಗಿದ ಮೊಸಳೆ ಮರಿ :ಆತಂಕದಲ್ಲಿ ಗ್ರಾಮಸ್ಥರು

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಬೇನಾಳ ಆರ್.ಸಿ. ಗ್ರಾಮದ ಅಗಸಿಯ ಮುಂದೆ ಮೊಸಳೆಯೊಂದು ಮರಿಯೊಂದಿಗೆ ಪ್ರತ್ಯಕ್ಷವಾಗಿದ್ದು, ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ.

ಬೇನಾಳ–ಅಬ್ಬಿಹಾಳ ರಸ್ತೆ ಮತ್ತು ಸೇತುವೆ ನಿರ್ಮಾಣಕ್ಕಾಗಿ ರಸ್ತೆಯ ಇಕ್ಕೆಲಗಳಲ್ಲಿ ತೆಗೆದಿದ್ದ ಮಣ್ಣಿನ ಕ್ವಾರಿಗಳಲ್ಲಿ ಆಲಮಟ್ಟಿ ಜಲಾಶಯದ ಹಿನ್ನೀರು ಸಂಗ್ರಹವಾಗುತ್ತದೆ. ಬೇಸಿಗೆಯಲ್ಲಿ ಹಿನ್ನೀರು ಇಳಿದರೂ ಕ್ವಾರಿಗಳಲ್ಲಿ ನೀರು ಉಳಿಯುವುದರಿಂದ ಮೊಸಳೆಗಳಿಗೆ ಇದು ಸೂಕ್ತ ಆವಾಸಸ್ಥಾನವಾಗಿದೆ. ಇಲ್ಲಿಯೇ ಮೊಸಳೆಗಳು ಮರಿಮಾಡಿದ್ದು, ಇದೀಗ ಗ್ರಾಮದತ್ತ ನುಗ್ಗುತ್ತಿವೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಈಗಾಗಲೇ ಕುರಿ, ಮೇಕೆ, ಜಾನುವಾರುಗಳು ಮೊಸಳೆ ದಾಳಿಗೆ ಬಲಿಯಾಗಿವೆ. ಕೆಲ ದಿನಗಳ ಹಿಂದೆ ದುರ್ಗಾದೇವಿಯ ಪಟ್ಟದ ಕೋಣದ ಮೇಲೆ ದಾಳಿ ನಡೆಸಿ ಬಾಲವನ್ನು ತಿಂದುಹಾಕಿದ ಘಟನೆಯೂ ನಡೆದಿದೆ. ಗ್ರಾಮದ ತ್ಯಾಜ್ಯ ನೀರು ಹರಿಯುವ ಅಗಸಿಯ ಮುಂದಿನ ಕೊರಕಲು ಗಿಡಗಂಟಿಗಳಿಂದ ಆವೃತವಾಗಿದ್ದು, ಮೊಸಳೆಗಳು ಅಲ್ಲಿ ವಾಸವಾಗಿವೆ. ಈ ಭಾಗದಲ್ಲಿ ಚಿಕ್ಕ ಮಕ್ಕಳು ಆಟವಾಡುವುದರಿಂದ ಅನಾಹುತದ ಭೀತಿ ಎದುರಾಗಿದೆ.

ಕೂಡಲೇ ಅರಣ್ಯ ಇಲಾಖೆ ಮೊಸಳೆಗಳನ್ನು ಸೆರೆಹಿಡಿದು ಬೇರೆಡೆ ಸ್ಥಳಾಂತರಿಸಬೇಕು ಎಂದು ಮುಖಂಡರಾದ ಬಿ.ಎಚ್. ಗಣಿ, ಮಾಜಿ ಗ್ರಾ.ಪಂ. ಅಧ್ಯಕ್ಷ ರಮೇಶ ವಂದಾಲ, ಮಹಮ್ಮದ ಬೆದ್ರೇಕರ, ಮಾಜಿ ಸದಸ್ಯ ಚಂದ್ರಪ್ಪ ಮನಗೂಳಿ, ಮಲ್ಲಪ್ಪ ಕುಂಬಾರ ಮತ್ತಿತರರು ಆಗ್ರಹಿಸಿದ್ದಾರೆ.

# ಹೊಸನಗರ ಹಳ್ಳದ ಸೇತುವೆ ಮೇಲೆ ಸಂಚಾರಕ್ಕೆ ಸಂಚಕಾರ


■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಪಟ್ಟಣದ ಹೊಸನಗರ ಹಳ್ಳದ ಸೇತುವೆ ತಗ್ಗು ದಿನ್ನೆಗಳ ಸಹಿತ ಮಳೆ ನೀರಿನಿಂದ ಆವೃತ್ತವಾಗಿದ್ದು ಸಂಚಾರಕ್ಕೆ ತೊಂದರೆಯುಂಟಾಗಿದೆ. ಆದ್ದರಿಂದ ಸುಗಮ ಸಂಚಾರಕ್ಕೆ ಕೂಡಲೇ ಸ್ಥಳೀಯ ಆಡಳಿತ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಹೊಸನಗರದ ಸೇತುವೆ ಸಾಕಷ್ಟು ದಿನಗಳಿಂದ ರಿಪೇರಿಗಾಗಿ ಕಾಯುತ್ತಿದೆ, ಆದರೆ ರಿಪೇರಿ ಮಾತ್ರ ತಾತ್ಕಾಲಿಕ. ಈ ಕುರಿತು ಜಯ ಕರ್ನಾಟಕ ಸಂಘಟನೆಯ ತಾಲ್ಲೂಕು ಘಟಕದ ಅಧ್ಯಕ್ಷ ಹಸನ್ ನಧಾಫ್ ಮಾತನಾಡಿ, ತಗ್ಗು ದಿನ್ನೆಗಳಿಂದ ಕೂಡಿದ ಸೇತುವೆಯ ಮೇಲೆ ಈಗ ಮಳೆಯ ನೀರು ಸೇರಿ ಸಂಚಾರಕ್ಕೆ ಸಂಚಕಾರ ತಂದಿದ್ದು ವಾಹನ ಸವಾರರು ಆತಂಕದಿಂದಲೇ ಸವಾರಿ ಮಾಡುವಂತಾಗಿದೆ. ಆದ್ದರಿಂದ ಸ್ಥಳೀಯ ಆಡಳಿತ ಸೇತುವೆ ರಿಪೇರಿಗೆ ತಾತ್ಕಾಲಿಕ ತೇಪೆ ಕಾರ್ಯ ಮಾಡದೇ ಅಗತ್ಯ ಕ್ರಮ ವಹಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಬೇಕೆಂದು ಆಗ್ರಹಿಸಿದರು.

ಸೇತುವೆ ದುರಸ್ತಿಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಹೊಸನಗರದ ಧುರೀಣ ಕಾಶೀನಾಥ ವಡ್ಡೋಡಗಿ ಚಿದಾನಂದ ಬಜಂತ್ರಿ, ದಾದಾ ಬೇಪಾರಿ, ಸಂಜೀವ ರಾಠೋಡ, ರಫೀಕ್ ಮಂಡೆ, ಭೀಮಾಶಂಕರ ಪಾಟೀಲ ಒತ್ತಾಯಿಸಿದ್ದಾರೆ.



# ಪದವಿ ವಿದ್ಯಾರ್ಥಿಗಳಿಂದ ಕ್ಷೇತ್ರ ಅಧ್ಯಯನ ಕಾರ್ಯ

■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರು ಎಸ್‌ಪಿ ಪಠ್ಯಕ್ರಮದಂತೆ ಪಟ್ಟಣದ ಶ್ರೀಮತಿ ಗಂಗೂಬಾಯಿ ಶಾಂತಗೌಡ ಪೋಲಿಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ ಎ 5 ನೇ ಸೆಮಿಸ್ಟರ್ ಓದುತ್ತಿರುವ ವಿದ್ಯಾರ್ಥಿಗಳು ಕ್ಷೇತ್ರ ಅಧ್ಯಯನ ಕಾರ್ಯ ಕೈಗೊಳ್ಳಲು ಗುರುವಾರ ಪುರಸಭೆ ಕಾರ್ಯಾಲಯಕ್ಕೆ ಭೇಟಿ ನೀಡಿ ಸ್ಥಳೀಯ ಸರ್ಕಾರದ ಕಾರ್ಯವೈಖರಿ ಕುರಿತು, ಅಧಿಕಾರ ಹಾಗೂ ಕರ್ತವ್ಯಗಳು ತಿಳಿದುಕೊಂಡು ಇಂಟರ್ನ್‌ಶಿಪ್ ಯೋಜನಾ ವರದಿಯನ್ನು ತಯಾರಿಸಲು ಪುರಸಭೆ ಅಧ್ಯಕ್ಷೆ ಗಿರಿಜಾ ರಮೇಶ ಕೊಡಗಾನೂರು, ಉಪಾಧ್ಯಕ್ಷೆ ಲಕ್ಷ್ಮೀಬಾಯಿ ಕಂಬಾರ, ಪುರಸಭೆ ಸದಸ್ಯರಾದ ರವಿ ಸೊನ್ನದ, ಬಸನಗೌಡ ಪತ್ತೇಪುರ, ಚಳಿಗೇಪ್ಪ ವ್ಯಾಗೇರಿ ಮುಖ್ಯಾಧಿಕಾರಿ ಪ್ರಕಾಶ ಬಾಗಲಿ, ಸಿಬ್ಬಂದಿಗಳಾದ ಪರಶುರಾಮ, ಸಿದ್ರಾಮಯ್ಯ ಇಂಡಿ ಹಾಗೂ ಚುನಾಯಿತ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿ ಸಮಗ್ರ ಮಾಹಿತಿಯನ್ನು ಪಡೆದುಕೊಂಡ ಪರಿ ಅನನ್ಯವಾಗಿ ಮೂಡಿ ಬಂತು.

ಕ್ಷೇತ್ರ ಅಧ್ಯಯನ ಕಾರ್ಯಕ್ಕೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದದಲ್ಲಿ ಪಾಲ್ಗೊಂಡು

ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಥಟ್ಟನೆ ಉತ್ತರಿಸುತ್ತಾ, ಅವರಲ್ಲಿ ಆತ್ಮವಿಶ್ವಾಸ ತುಂಬುವುದರ ಜೊತೆಗೆ ವರದಿಗೆ ಬೇಕಾದ ಪೂರಕ ಮಾಹಿತಿಗಳನ್ನು ಹಂಚಿಕೊಂಡ ಪುರಸಭೆ ಅಧ್ಯಕ್ಷೆ, ಉಪಾಧ್ಯಕ್ಷೆ, ಮುಖ್ಯಾಧಿಕಾರಿ, ಪುರಸಭೆ ಸರ್ವ ಸದಸ್ಯರಿಗೂ ಕಾಲೇಜಿನ ಸಿಡಿಸಿ ಸದಸ್ಯ ಡಾ ಯಂಕನಗೌಡ ಎಸ್ ಪಾಟೀಲ್ ಕೃತಜ್ಞತೆ ಸಲ್ಲಿಸಿದರು.

ಇದೇ ವೇಳೆ ಸಹಕಾರಿ ಸಂಘ ಕೆಂಭಾವಿ–2 ಉಪಾಧ್ಯಕ್ಷ ತಿಪ್ಪಣ್ಣ ಯಾಳಗಿ, ಕಾರ್ಯದರ್ಶಿ ರಂಗಪ್ಪ ವಡ್ಡರ, ಕಾಲೇಜಿನ ಬೋಧಕ ಸಿಬ್ಬಂದಿಗಳಾದ ನಸ್ರೀನ್ ತಾಜ್, ಸುಮಾ ಎಚ್, ಡಾ ಪೂಜಾ ಹೊನ್ನುಟಗಿ, ಮಲ್ಲಿಕಾರ್ಜುನ ಮರಡ್ಡಿ ಕರಡಕಲ್, ಡಾ ಉಪೇಂದ್ರ ನಾಯಕ, ಶರಣಬಸವ ಅಂಗಡಿ, ಸಂಗಮೇಶ ಪಟ್ಟಣಕರ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು

# ಪೌರ ಕಾರ್ಮಿಕರ ಶ್ರಮಕ್ಕೆ ಪತ್ರಕರ್ತರಿಂದ ಸಲಾಂ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಕಾರ್ಯನಿರತ ಪತ್ರಕರ್ತರ ಸಂಘ ಅಥಣಿ ಘಟಕದ ವತಿಯಿಂದ ಪೌರ ಕಾರ್ಮಿಕರ ದಿನಾಚರಣೆ ಅಂಗವಾಗಿ ಪತ್ರಕರ್ತರ ಸಂಘದ ಕಚೇರಿ ಆವರಣದಲ್ಲಿ ಆರು ಜನ ಪೌರ ಕಾರ್ಮಿಕರನ್ನು ಸನ್ಮಾನಿಸಿ, ಉಡುಗೊರೆ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮಕ್ಕೆ ಅತಿಥಿಯಾಗಿ ಆಗಮಿಸಿದ್ದ ಸಿದ್ದು ಹಂಡಗಿ ಅವರನ್ನೂ ಪತ್ರಕರ್ತರ ಸಂಘದ ವತಿಯಿಂದ ಸತ್ಕರಿಸಲಾಯಿತು.

ಈ ವೇಳೆ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಕೇಶ ಮೈಗೂರ ಮಾತನಾಡಿ, ಪೌರ ಕಾರ್ಮಿಕರ ಕಾರ್ಯ ಅತ್ಯಂತ ಮಹತ್ವದ್ದು ಹಾಗೂ ಕಷ್ಟಕರವಾದದ್ದು ನಾವೆಲ್ಲರೂ ಎಚ್ಚರಗೊಳ್ಳುವ ಮುನ್ನವೇ ಅವರು ಪಟ್ಟಣದ ಗಲ್ಲಿಗಲ್ಲಿಗೂ ತೆರಳಿ ಸ್ವಚ್ಛತಾ ಕಾರ್ಯದಲ್ಲಿ ತೊಡಗುತ್ತಾರೆ ಕೋವಿಡ್ ಸಂದರ್ಭದಲ್ಲಿ ತಮ್ಮ ಪ್ರಾಣದ ಹಂಗು ತೊರೆದು ಕೊರೋನಾ ವಾರಿಯರ್ಸ್‌ಗಳಾಗಿ ಸೇವೆ ಸಲ್ಲಿಸಿರುವುದು ನಿಜಕ್ಕೂ ಶ್ಲಾಘನೀಯ ಎಂದರು

ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಅಣ್ಣಾಸಾಬ ತೆಲಸಂಗ ಮಾತನಾಡಿ, ಪಟ್ಟಣ ಹಾಗೂ ಸಮಾಜದ ಸ್ವಚ್ಛತೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಪೌರ ಕಾರ್ಮಿಕರನ್ನು ಸತ್ಕರಿಸಿ ಗೌರವಿಸಿರುವುದು ಸಂತಸದ ಸಂಗತಿ ಪೌರ ಕಾರ್ಮಿಕರಿಗೆ ಸರ್ಕಾರದಿಂದ ದೊರೆಯಬೇಕಾದ ಎಲ್ಲ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಅವರು ನಿರಂತರವಾಗಿ ಹೋರಾಟ ನಡೆಸುತ್ತಿದ್ದು ಪತ್ರಕರ್ತರು ಅವರ ಧ್ವನಿಯಾಗಿ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವ ಕಾರ್ಯ ಮಾಡಲಿದ್ದಾರೆ ಎಂದರು

ಪೌರ ಕಾರ್ಮಿಕರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ಕಾಂಬಳೆ ಮಾತನಾಡಿ, ನಮ್ಮ ಬೇಡಿಕೆಗಳ ಈಡೇರಿಕೆಗಾಗಿ ಪತ್ರಕರ್ತರು ಸದಾ ನಮ್ಮೊಂದಿಗೆ ನಿಲ್ಲುವುದಾಗಿ ಭರವಸೆ ನೀಡಿರುವುದು ಆಶಾಭಾವನೆ ಮೂಡಿಸಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಕನ್ನಡ ಪರ ಹೋರಾಟಗಾರ ಶಬ್ಬೀರ ಸಾತಬಚ್ಚೆ, ಸಿದ್ದು ಹಂಡಗಿ, ಸುಂದರ ಸೌದಾಗರ, ಪತ್ರಕರ್ತರಾದ ಶಿವಕುಮಾರ ಅಪರಾಜ, ರಮೇಶ ಬಾದವಾಡಗಿ, ಪರಶುರಾಮ ನಂದೇಶ್ವರ, ಜಬ್ಬಾರ ಚಿಂಚಲಿ, ವಿಲಾಸ ಕಾಂಬಳೆ, ಸಂದೀಪ ಘಟಕಾಂಬಳೆ, ರಾಜು ಕಾವೇರಿ, ಯಾಸಿನ ಝಾರೆ ಸೇರಿದಂತೆ ಪೌರ ಕಾರ್ಮಿಕರು ಉಪಸ್ಥಿತರಿದ್ದರು

# ಬಸವರಾಜ ಕುಂಬಾರ ನಿಧನಕ್ಕೆ ಸಚಿವ ಎಂ.ಬಿ.ಪಾಟೀಲ ಕಂಬನಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರೈತ ಮುಖಂಡ, ಜಿಪಂ ಮಾಜಿ ಸದಸ್ಯ, ಕೃಷ್ಣಾ ಕಾಡಾ ಮಾಜಿ ಅಧ್ಯಕ್ಷ ಬಸವರಾಜ ಕುಂಬಾರ ಅವರ ನಿಧನಕ್ಕೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಕಂಬನಿ ಮಿಡಿದಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಸದಾ ರೈತರ ಪರವಾಗಿ ಚಿಂತಿಸುತ್ತಿದ್ದ ಉತ್ಸಾಹಿ ರೈತ ಮುಖಂಡರಾದ ಬಸವರಾಜ ಕುಂಬಾರ ಅವರು ನಿಧನರಾಗಿರುವುದು ಅತೀವ ದುಃಖ ತಂದಿದೆ. 2008ರಿಂದ 2013ರ ಅವಧಿಯಲ್ಲಿ ಕೆರೆಗಳನ್ನು ತುಂಬಿಸುವ ಹೋರಾಟಕ್ಕೆ ಬಸವರಾಜ ಕುಂಬಾರ ಅವರು ಸಕ್ರಿಯವಾಗಿ ಕೈಜೋಡಿಸಿದ್ದರು. ನಮ್ಮ ಃಐಆಇ ಸಂಸ್ಥೆಯ ವತಿಯಿಂದ ಕೆರೆಗಳನ್ನು ತುಂಬಿಸುವ ಯೋಜನೆಯನ್ನು ರೂಪಿಸಿ, ಅದನ್ನು ಕಾರ್ಯಗತಗೊಳಿಸಲು ಕಾರ್ಯಕ್ರಮ ರೂಪಿಸಿದ ಸಂದರ್ಭದಲ್ಲಿ, ಬಸವರಾಜ ಕುಂಬಾರ ಅವರು ಸಂಚಾಲಕರಾಗಿ ಅವಳಿ ಜಿಲ್ಲೆಗಳಲ್ಲಿ ಸಂಘಟನೆ ಮಾಡಿ, ಹೋರಾಟಕ್ಕೆ ಬಲ ತುಂಬಿದ್ದರು. ಅವಳಿ ಜಿಲ್ಲೆಗಳಲ್ಲಿ ಕೆರೆ ತುಂಬಿಸುವ ಯೋಜನೆಯನ್ನು ಸಾಕಾರಗೊಳಿಸುವಲ್ಲಿ ಅವರ ಪಾತ್ರವೂ ಅಪಾರವಾಗಿತ್ತು ಎಂಬುದನ್ನು ಈ ಸಂದರ್ಭದಲ್ಲಿ ಸ್ಮರಿಸುತ್ತೇನೆ ಎಂದು ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ 32 ಜಿಲ್ಲಾ ಪಂಚಾಯಿತಿ ಸದಸ್ಯ ಸ್ಥಾನಗಳಿದ್ದು, 30 ಸ್ಥಾನಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿತ್ತು. ಒಬ್ಬರು ಪಕ್ಷೇತರರಾಗಿದ್ದರೆ, ಬಿಜೆಪಿಯಿಂದ ಆಯ್ಕೆಯಾಗಿದ್ದ ಏಕೈಕ ಸದಸ್ಯ ಬಸವರಾಜ ಕುಂಬಾರ ಅವರಾಗಿದ್ದರು. ಒಬ್ಬಂಟಿಯಾಗಿಯೇ ಜಿಲ್ಲಾ ಪಂಚಾಯತ್‌ನಲ್ಲಿ ವಿಪಕ್ಷ ನಾಯಕರಾಗಿ ಸಮರ್ಥವಾಗಿ ಕಾರ್ಯನಿರ್ವಹಿಸಿದ್ದ ಅವರ ರಾಜಕೀಯ ಹೋರಾಟದ ಛಲವೂ ಸ್ಮರಣೀಯ.

ಸಾಮಾನ್ಯ ಕುಟುಂಬದಲ್ಲಿ ಜನಿಸಿ, ಕೈಗಾರಿಕೆ ಸ್ಥಾಪಿಸುವ ಕನಸು ಹೊತ್ತು ಕೊಲ್ಲಾಪುರಕ್ಕೆ ತೆರಳಿ, ರತ್ನಪ್ಪ ಕುಂಬಾರ ಅವರ ಆಶ್ರಯದಲ್ಲಿ ಉದ್ಯಮಿಯಾಗಿ ಬೆಳೆದು, ಸಕ್ಕರೆ ಕಾರ್ಖಾನೆ ಸ್ಥಾಪಿಸಿ, ನಂತರ ಹುಟ್ಟೂರು ನಿಡಗುಂದಿಗೆ ಮರಳಿ ರೈತ ಮುಖಂಡರಾಗಿ ಗುರುತಿಸಿಕೊಂಡ ಅವರ ಜೀವನ ಪಯಣವೇ ಸ್ಫೂರ್ತಿದಾಯಕ.

ಬಸವರಾಜ ಕುಂಬಾರ ಅವರು ವೈಯಕ್ತಿಕವಾಗಿ ನನ್ನೊಂದಿಗೆ ಅತ್ಯಂತ ಆತ್ಮೀಯ ಒಡನಾಟ ಹೊಂದಿದ್ದರು. ಇತ್ತೀಚಿನ ದಿನಗಳಲ್ಲಿ ಕಿಡ್ನಿ ಸಮಸ್ಯೆಯಿಂದ ಬಳಲುತ್ತಿದ್ದ ಅವರು, ಚಿಕಿತ್ಸೆಯಿಂದ ಚೇತರಿಸಿಕೊಂಡು ನಮ್ಮೊಂದಿಗೆ ಮತ್ತೆ ಇರಲಿದ್ದಾರೆ ಎಂಬ ನಿರೀಕ್ಷೆ ಹುಸಿಯಾಗಿದೆ. ಅವರ ಅಗಲಿಕೆ ನನಗೆ ವೈಯಕ್ತಿಕವಾಗಿಯೂ ಅಪಾರ ನೋವು ತಂದಿದೆ.ರೈತರ ಪರವಾಗಿ ಸದಾ ಧ್ವನಿ ಎತ್ತುತ್ತಿದ್ದ, ಹೋರಾಟದ ಮನೋಭಾವದ ಬಸವರಾಜ ಕುಂಬಾರ ಅವರ ಅಗಲಿಕೆ ರೈತ ಸಮುದಾಯ ಹಾಗೂ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. ಮೃತರ ಆತ್ಮಕ್ಕೆ ಭಗವಂತನು ಚಿರಶಾಂತಿ ಕರುಣಿಸಲಿ. ಅವರ ಕುಟುಂಬವರ್ಗ, ಬಂಧುಬಳಗ ಹಾಗೂ ಅಪಾರ ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿಯನ್ನು ಪರಮಾತ್ಮನು ನೀಡಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಸಚಿವ ಎಂ. ಬಿ. ಪಾಟೀಲ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

# ವಿಶೇಷಚೇತನ ಮಕ್ಕಳಿಗೆ ಉಚಿತ ನೇತ್ರ ತಪಾಸಣೆ ಶಿಬಿರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 11ನೇ ರಾಷ್ಟ್ರೀಯ ಆಯುರ್ವೇದ ದಿನದ ಅಂಗವಾಗಿ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್. ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಶಾಲಾಕ್ಯ ತಂತ್ರ ವಿಭಾಗದ ವತಿಯಿಂದ ಬಿ.ಎಲ್.ಡಿ.ಇ– ರಘುಕುಲ ಸಮನ್ವಯ ಶಾಲೆಯಲ್ಲಿ ವಿಶೇಷಚೇತನ ಮಕ್ಕಳ ಉಚಿನ ನೇತ್ರ ತಪಾಸಣೆ ಶಿಬಿರ ಸೋಮವಾರ ನಡೆಯಿತು. ಈ ಶಿಬಿರದಲ್ಲಿ ಶಾಲೆಯ ಸುಮಾರು 35 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಕಣ್ಣು, ಕಿವಿ, ಮೂಗು ಹಾಗೂ ಗಂಟಲು ತಪಾಸಣೆ ನಡೆಸಲಾಯಿತು. ಮಕ್ಕಳ ಆರೋಗ್ಯಕ್ಕೆ ಸಂಬಂಧಿಸಿದಂತೆ ಅಗತ್ಯ ತಪಾಸಣೆ ನಡೆಸಿ, ಕಣ್ಣಿನ ಆರೈಕೆ, ಸ್ವಚ್ಛತೆ ಹಾಗೂ ಕಣ್ಣಿನ ಆರೋಗ್ಯದ ಕುರಿತು ಸೂಕ್ತ ಆರೋಗ್ಯ ಶಿಕ್ಷಣ ಮತ್ತು ಮಾರ್ಗದರ್ಶನ ನೀಡಲಾಯಿತು. ವಿಶೇಷ ಅಗತ್ಯವುಳ್ಳ ಮಕ್ಕಳಲ್ಲಿ ಕಣ್ಣಿನ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿ, ಅಗತ್ಯವಿದ್ದಲ್ಲಿ ಸೂಕ್ತ ವೈದ್ಯಕೀಯ ಸಲಹೆ ಮತ್ತು ಮುಂದಿನ ಚಿಕಿತ್ಸಾ ಕ್ರಮಗಳನ್ನು ಕೈಗೊಳ್ಳುವ ಉದ್ದೇಶದಿಂದ ಈ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಶಾಲಾಕ್ಯ ತಂತ್ರ ವಿಭಾಗದ ಡಾ. ಗಂಗಾಧರ ತಿಮ್ಮಾಪುರ, ಡಾ. ರಾಜೇಸಾಬ ಕಬಾಡೆ ಹಾಗೂ ಡಾ. ನಂದಿತಾ ಕುಲಕರ್ಣಿ ಅವರು ಭಾಗವಹಿಸಿ ವಿದ್ಯಾರ್ಥಿಗಳ ಕಣ್ಣಿನ ತಪಾಸಣೆ ನಡೆಸಿದರು. ಈ ಸಂದರ್ಭದಲ್ಲಿ ಡಾ. ಅಮೃತಾ, ಡಾ. ಮಯೂರ ಹಾಗೂ ಡಾ. ವೈಷ್ಣವಿ ಕೂಡ ಉಪಸ್ಥಿತರಿದ್ದರು.

# ಸೆ.25 ರಿಂದ ಕಾಮಿಡಿ ಕಿಲಾಡಿಗಳು ಖ್ಯಾತಿ ರಾಘು ರಂಗಪ್ರದರ್ಶನ

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ನಗರದಲ್ಲಿ ಸೆ.25 ರಿಂದ ಸೆ.27 ವರೆಗೆ ಜೀ ಕನ್ನಡ ವಾಹಿನಿಯ 'ಕಾಮಿಡಿ ಕಿಲಾಡಿಗಳು' ಖ್ಯಾತಿಯ ರಾಘು (ರಾಗಿಣಿ) ಅವರು ಮೂರು ದಿನಗಳ ಕಾಲ ರಂಗಪ್ರದರ್ಶನ ನೀಡಿ ರಂಜಿಸಲಿದ್ದಾರೆ.

ನಗರದ ವಜ್ರಹನುಮಾನ ಗೇಟ್ ಹತ್ತಿರದ ಶ್ರೀ 1008 ಜಗದ್ಗುರು ರೇಣುಕಾಚಾರ್ಯ ನಾಟ್ಯ ಸಂಘ ಮೈಂದರ್ಗಿ ಅವರ ರಂಗಸಜ್ಜಿಕೆಯಲ್ಲಿ ಸಂಘದ ಹಾಗೂ ಬಡ ಕಲಾವಿದರ ಸಹಾಯಾರ್ಥ ಪ್ರದರ್ಶನಗೊಳ್ಳಲಿರುವ "ಅಡಮುಟ್ಟ ಮಾವ, ಎಡವಟ್ಟ ಅಳಿಯ" ನಾಟಕದಲ್ಲಿ ಕಾಮಿಡಿ ಕಿಲಾಡಿಗಳು' ಖ್ಯಾತಿಯ ರಾಘು (ರಾಗಿಣಿ) ಅವರು ಹಾಸ್ಯ ಪಾತ್ರದಲ್ಲಿ ಅಭಿನಯಿಸಲಿದ್ದಾರೆ. ಸೆ.25 ಶುಕ್ರವಾರದಿಂದ ಸೆ.27 ರವಿವಾರದವರೆಗೆ ಮೂರು ದಿನ ಪ್ರತಿದಿನ ಮಧ್ಯಾಹ್ನ 3.15 ಮತ್ತು ಸಂಜೆ 6.30 ಘಂಟೆಗೆ ಪ್ರದರ್ಶನಗೊಳ್ಳಲಿರುವ ಈ ನಾಟಕಕ್ಕೆ ಕಲಾಭಿಮಾನಿಗಳು ಸಂಘ ಮತ್ತು ಬಡ ಕಲಾವಿದರ ಸಹಾಯಾರ್ಥವಾಗಿ ಆಗಮಿಸಿ ರಂಗಭೂಮಿಯನ್ನು ಉಳಿಸಿ ಬೆಳೆಸಬೇಕೆಂದು ಸಂಘದ ಮಾಲಿಕ ಎಂ.ಎಸ್.ಮಡ್ಡೆ, ವ್ಯವಸ್ಥಾಪಕರಾದ ಶಂಕರಪ್ಪ ಚೌಡಾಪೂರ ಮತ್ತು ಸದಾಶಿವ ಹಿರೇಮಠ ಕೋರಿದ್ದಾರೆ.

## ಖೋ-ಖೋ ತಾಲೂಕು ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಲಕಪ್ಪ ಸುಂಗಠಾಣ ರಿಂದ ಕೊಡುಗೆ

# ಬಂಕಲಗಿ ಪ್ರೌಢಶಾಲೆ ಕ್ರೀಡಾಪಟುಗಳಿಗೆ ಸಮವಸ್ತ್ರ ಕಾಣಿಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸರ್ಕಾರಿ ಶಾಲೆಗಳ ಬೆಳವಣಿಗೆಗೆ ಸರ್ಕಾರದ ಜೊತೆಗೆ ಸಮಾಜದ ಸಹಕಾರವೂ ಅಗತ್ಯ ಎಂದು ಯರಗಲ್ಲ ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಮಲಕಪ್ಪ ಸುಂಗಠಾಣ ಹೇಳಿದರು.ತಾಲೂಕು ಮಟ್ಟದ ಖೋ–ಖೋ ಕ್ರೀಡಾಕೂಟಕ್ಕೆ ಆಯ್ಕೆಯಾದ ಬಂಕಲಗಿ ಸರ್ಕಾರಿ ಪ್ರೌಢಶಾಲೆಯ ಕ್ರೀಡಾಪಟುಗಳಿಗೆ ಸ್ವಂತ ವೆಚ್ಚದಲ್ಲಿ ಸಮವಸ್ತ್ರ ವಿತರಿಸಿ ಅವರು ಮಾತನಾಡಿದರು.


"ನಮ್ಮ ಗ್ರಾಮದಲ್ಲಿ ಹಿಂದೆ ಕ್ರೀಡೆಯ ಬಗ್ಗೆ ಹೆಚ್ಚಿನ ಅರಿವಿರಲಿಲ್ಲ. ಆದರೆ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಹಾಗೂ ಕ್ರೀಡಾ ತರಬೇತುದಾರ ಸಿದ್ಧಲಿಂಗ ಚೌಧರಿ ಅವರು ಕಳೆದ ಎರಡು ತಿಂಗಳಿಂದ ಪ್ರತಿದಿನ ಬೆಳಿಗ್ಗೆ 7ರಿಂದ 9ರವರೆಗೆ ಹಾಗೂ ಸಂಜೆ 4ರಿಂದ 6.30ರವರೆಗೆ ನಿರಂತರವಾಗಿ ತರಬೇತಿ ನೀಡುತ್ತಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿಗಳು ವಲಯ ಮಟ್ಟದಲ್ಲಿ ವಿಜೇತರಾಗಿ ತಾಲೂಕು ಮಟ್ಟಕ್ಕೆ ಆಯ್ಕೆಯಾಗಿರುವುದು ಸಂತಸದ ವಿಷಯವಾಗಿದೆ" ಎಂದು ಅವರು ಹೇಳಿದರು.

"ನಾನು ಬಡತನದಲ್ಲಿ ಬೆಳೆದು ಶಿಕ್ಷಣ ಪಡೆದವನು. ವಿದ್ಯಾರ್ಥಿ ಜೀವನದಲ್ಲಿ ಇಂತಹ ಸೌಲಭ್ಯಗಳು ನನಗೆ ದೊರೆತಿರಲಿಲ್ಲ. ಇಂದು ನನಗೆ ದೊರೆಯುತ್ತಿರುವ ಅಲ್ಪ ಸಂಬಳದಲ್ಲಿ, ನಾನು ಓದಿದ ಮಾತೃಶಾಲೆಯ ವಿದ್ಯಾರ್ಥಿಗಳಿಗೆ ನನ್ನ ಕೈಲಾದ ನೆರವು ನೀಡಬೇಕೆಂಬ ಉದ್ದೇಶದಿಂದ ಸಮವಸ್ತ್ರವನ್ನು ಕಾಣಿಕೆಯಾಗಿ ನೀಡಿದ್ದೇನೆ" ಎಂದು ಮಲಕಪ್ಪ ಸುಂಗಠಾಣ ತಿಳಿಸಿದರು.

ಬಂಕಲಗಿ ಗ್ರಾಮದವರಾದ ಮಲಕಪ್ಪ ಸುಂಗಠಾಣ ಅವರು ಯರಗಲ್ಲ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಿಲ್ ಕಲೆಕ್ಟರ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ. ಕಾರ್ಯಕ್ರಮದಲ್ಲಿ ಗ್ರಾಮದ ಯುವಕರಾದ ಮಲ್ಲು ಪಡಸಲಗಿ, ಶ್ರೀಮಂತ ಸುಂಗಠಾಣ, ಬಸವರಾಜ ಭಜಂತ್ರಿ, ಮಾಳು ಪಡದಳ್ಳಿ, ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ವಿ.ಎಸ್. ಪಾಟೀಲ, ಸುಖದೇವ ಹಿರೇಕುರುಬರ ,ಶಂಕರ ಬಿರಾದಾರ, ಹಮೀದ ಅವಟಿ, ರೋಹಿತ ತಳಗೇರಿ ಹಾಗೂ ಕ್ರೀಡಾ ತರಬೇತುದಾರ ಸಿದ್ಧಲಿಂಗ ಚೌಧರಿ ಉಪಸ್ಥಿತರಿದ್ದರು.

# ಚೆಸ್: ರಾಜ್ಯ ಮಟ್ಟಕ್ಕೆ ಸಿದ್ದು ತಳಗೆರೆ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಗರದ ಎಚ್.ಜಿ.ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಸಿದ್ದು ತಳಗೆರೆ ಚೆಸ್ ವಿಭಾಗದಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾನೆ. ವಿದ್ಯಾರ್ಥಿ ಈ ಸಾಧನೆಗೆ ಹಾಗೂ ಮಾರ್ಗದರ್ಶನ ಮಾಡಿ ತರಬೇತಿ ನೀಡಿದ ದೈಹಿಕ ಉಪನ್ಯಾಸಕ ಸತೀಶ ಬಸರಕೋಡ ಅವರಿಗೆ ಸಂಸ್ಥೆಯ ಅಧ್ಯಕ್ಷ ಹಾಗೂ ಶಾಸಕ ಅಶೋಕ ಮನಗೂಳಿ, ಆಡಳಿತ ಮಂಡಳಿ ಸದಸ್ಯರು, ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಅಭಿನಂದನೆ ಸಲ್ಲಿಸಿದರು.ಈ ವೇಳೆ ಉಪನ್ಯಾಸಕರಾದ ಎಸ್.ಎ.ಪಾಟೀಲ, ಎಂ.ಎನ್.ಅಜ್ಜಪ್ಪ, ಡಾ.ಎಸ್.ಎಸ್. ಚವ್ಹಾಣ, ಎಫ್.ಎ.ಹಾಲಪ್ಪನವರ, ಎ.ಆರ್.ಸಿಂದಗಿಕರ, ಸಿದ್ದಲಿಂಗ ಕಿಣಗಿ, ಸತೀಶ ಬಸರಕೋಡ, ಮುಕ್ತಾಯಕ್ಕ ಕತ್ತಿ ಸೇರಿದಂತೆ ಇತರರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR